# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 102 | WEDNESDAY 24-06-2026 | PRGI No : KNKAN/26/A0962 | Pages:4 | Rs.2.00 | M: 9742418836


## MLC ಚುನಾವಣೆ ಅಡ್ಡ ಮತದಾನ: ಪಕ್ಷ ದ್ರೋಹಿಗಳ ವಿರುದ್ಧ ಈಗಾಗಲೇ ಕ್ರಮ ಆರಂಭಿಸಲಾಗಿದೆ: ಆರ್ ಅಶೋಕ್



ಬೆಂಗಳೂರು: ಕರ್ನಾಟಕ ವಿಧಾನ ಪರಿಷತ್ (ಎಂಎಲ್‌ಸಿ) ಚುನಾವಣೆಯಲ್ಲಿ ಪಕ್ಷಕ್ಕೆ ದ್ರೋಹ ಎಸಗಿದವರ ವಿರುದ್ಧ ಈಗಾಗಲೇ ಕ್ರಮ ಆರಂಭಿಸಲಾಗಿದೆ ಎಂದು ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಹಾಗೂ ಬಿಜೆಪಿ ಹಿರಿಯ ನಾಯಕ ಆರ್. ಅಶೋಕ್ ಮಂಗಳವಾರ ತಿಳಿಸಿದ್ದಾರೆ.

ಕರ್ನಾಟಕ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದ ರಾಜ್ಯದ ಬಿಜೆಪಿ ಹಿರಿಯ ನಾಯಕರು ಮಂಗಳವಾರ ದೆಹಲಿಯಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರನ್ನು ಭೇಟಿ ಮಾಡಿ, ಇತ್ತೀಚೆಗೆ ನಡೆದ ರಾಜ್ಯ ವಿಧಾನ ಪರಿಷತ್ ಚುನಾವಣೆಯಲ್ಲಿ ನಡೆದಿರುವುದಾಗಿ ಆರೋಪಿಸಲಾದ ಅಡ್ಡಮತದಾನದ ಕುರಿತು ಮಾಹಿತಿ ನೀಡಿದರು.

ವಿಧಾನ ಪರಿಷತ್ ಚುನಾವಣೆಯಲ್ಲಿ ನಡೆದಿರುವ ಅಡ್ಡಮತದಾನವನ್ನು ಗಂಭೀರವಾಗಿ ಪರಿಗಣಿಸಿರುವ ನಿತಿನ್ ನಬಿನ್, ಕಳೆದ ವಾರವೇ ವಿಜಯೇಂದ್ರ ಸೇರಿದಂತೆ ಕರ್ನಾಟಕ ಬಿಜೆಪಿ ಘಟಕದ ಪ್ರಮುಖ ನಾಯಕರನ್ನು ದೆಹಲಿಗೆ ಕರೆಸಿಕೊಂಡಿದ್ದರು.

ಪಕ್ಷದ ಕೇಂದ್ರ ಕಚೇರಿಯಲ್ಲಿ ನಡೆದ ಸಭೆಯಲ್ಲಿ, ಕರ್ನಾಟಕ ಬಿಜೆಪಿ ನಾಯಕರು ಚುನಾವಣೆಯಲ್ಲಿನ ಅಡ್ಡಮತದಾನದ ಕುರಿತು ಲಭ್ಯವಿರುವ ಪ್ರಾಥಮಿಕ ಮಾಹಿತಿಗಳನ್ನು ರಾಷ್ಟ್ರೀಯ ಅಧ್ಯಕ್ಷರಿಗೆ ವಿವರವಾಗಿ ಸಲ್ಲಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಆರ್ ಅಶೋಕ್, 'ಅಡ್ಡಮತದಾನ (ಕ್ರಾಸ್ ವೋಟಿಂಗ್) ವಿಚಾರವಾಗಿ ಪಕ್ಷದ ರಾಷ್ಟ್ರೀಯ ನಾಯಕರೊಂದಿಗೆ ಚರ್ಚೆ ನಡೆಸಲಾಗಿದೆ ಎಂದು ಹೇಳಿದರು.

"ನಾವು ನಮ್ಮ ರಾಷ್ಟ್ರೀಯ ಅಧ್ಯಕ್ಷರನ್ನು ಭೇಟಿ ಮಾಡಿ ಕರ್ನಾಟಕ ಎಂಎಲ್‌ಸಿ ಚುನಾವಣೆಯ ಅಡ್ಡಮತದಾನದ ವಿಷಯದ ಕುರಿತು ಚರ್ಚೆ ನಡೆಸಿದ್ದೇವೆ. ಈ ವಿಚಾರವನ್ನು ತಮ್ಮ ಮೇಲೆಯೇ ಬಿಡುವಂತೆ ಅವರು ನಮಗೆ ತಿಳಿಸಿದ್ದು, ಪಕ್ಷಕ್ಕೆ ದ್ರೋಹ ಮಾಡಿದವರ ವಿರುದ್ಧ ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ ಎಂದು ಭರವಸೆ ನೀಡಿದ್ದಾರೆ.

ಪಕ್ಷದ ಸಂಘಟನೆಗೆ ಸಂಬಂಧಿಸಿದ ವಿಚಾರಗಳ ಬಗ್ಗೆಯೂ ಸುದೀರ್ಘ ಚರ್ಚೆ ನಡೆಸಿದ್ದೇವೆ. ಮುಂದಿನ ದಿನಗಳಲ್ಲಿ ಪಕ್ಷವನ್ನು ಇನ್ನಷ್ಟು ಬಲಪಡಿಸಿ ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ನಾಯಕರೊಂದಿಗೆ ಸಮಾಲೋಚನೆ ನಡೆಸಲಾಗಿದೆ" ಎಂದು ಅಶೋಕ್ ಹೇಳಿದರು.

ಜೂನ್ 18ರಂದು ನಡೆದ ಕರ್ನಾಟಕ ವಿಧಾನ ಪರಿಷತ್ ಚುನಾವಣೆಯಲ್ಲಿ ಹಲವು ಬಿಜೆಪಿ ಶಾಸಕರು ಅಡ್ಡಮತದಾನ ನಡೆಸಿದ್ದಾರೆ ಎಂಬ ಆರೋಪಗಳ ಬೆನ್ನಲ್ಲೇ ಈ ಸಭೆ ಮಹತ್ವ ಪಡೆದುಕೊಂಡಿದೆ. ಇದಕ್ಕೂ ಮುನ್ನ ಇದೇ ದಿನ ಮಾತನಾಡಿದ್ದ ಆರ್. ಅಶೋಕ್, ಅಡ್ಡಮತದಾನ ಅತ್ಯಂತ ಗಂಭೀರ ವಿಷಯವಾಗಿದ್ದು, ಶಿಸ್ತು ಕ್ರಮ ಕೈಗೊಳ್ಳುವ ಸಂಬಂಧ ಈ ವಿಷಯವನ್ನು ಪಕ್ಷದ ಕೇಂದ್ರ ನಾಯಕತ್ವದ ಮುಂದಿಡಲಾಗುವುದು ಎಂದು ತಿಳಿಸಿದ್ದರು.

ಏಳು ವಿಧಾನ ಪರಿಷತ್ ಸ್ಥಾನಗಳ ಚುನಾವಣೆಯಲ್ಲಿ ಬಿಜೆಪಿ ಎರಡು ಸ್ಥಾನಗಳನ್ನು ಗೆದ್ದರೆ, ಕಾಂಗ್ರೆಸ್ ಐದು ಸ್ಥಾನಗಳನ್ನು ತನ್ನದಾಗಿಸಿಕೊಂಡಿತು. ಕರ್ನಾಟಕ ವಿಧಾನಸಭೆಯಲ್ಲಿ ಬಿಜೆಪಿಗೆ 64 ಶಾಸಕರ ಬಲವಿದ್ದರೂ, ಪಕ್ಷದ ಇಬ್ಬರು ಅಭ್ಯರ್ಥಿಗಳಿಗೆ ಒಟ್ಟಾರೆ ಕೇವಲ 56 ಮತಗಳು ಮಾತ್ರ ಲಭಿಸಿದ್ದವು. ಇದರಿಂದ ಎಂಟು ಮತಗಳ ಕೊರತೆ ಉಂಟಾಗಿದ್ದು, ಪಕ್ಷದೊಳಗಿನ ಅಡ್ಡಮತದಾನದ ಆರೋಪಗಳಿಗೆ ಕಾರಣವಾಗಿದೆ.

### ಹೈಕಮಾಂಡ್ ಫುಲ್ ಗರಂ

ಪಕ್ಷದ ಮೂಲಗಳ ಪ್ರಕಾರ, ಅಡ್ಡಮತದಾನದ ಆರೋಪಗಳ ಬಗ್ಗೆ ಬಿಜೆಪಿ ಕೇಂದ್ರ ನಾಯಕತ್ವ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಹಾಗೂ ರಾಜ್ಯ ಉಸ್ತುವಾರಿ ರಾಧಾಮೋಹನ್ ದಾಸ್ ಅಗರವಾಲ್ ಅವರನ್ನು ದೆಹಲಿಗೆ ಕರೆಸಿ ಬೆಳವಣಿಗೆಗಳ ಕುರಿತು ಮಾಹಿತಿ ಪಡೆದಿದೆ.

ಇದೇ ವೇಳೆ, ಬಿಜೆಪಿ ಶಾಸಕಾಂಗ ಪಕ್ಷದ ಸದಸ್ಯರು ನಡೆಸಿರುವ ಅಡ್ಡಮತದಾನದ ಆರೋಪದ ತನಿಖೆಗಾಗಿ ಕರ್ನಾಟಕ ಬಿಜೆಪಿ ಮೂರು ಸದಸ್ಯರ ಸಮಿತಿಯನ್ನು ರಚಿಸಿದೆ. ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ, ರಾಜ್ಯ ಉಪಾಧ್ಯಕ್ಷ ಎನ್. ಮಹೇಶ್ ಹಾಗೂ ಶಾಸಕ ಮಹೇಶ್ ಟೆಂಗಿನಕಾಯಿ ಸದಸ್ಯರಾಗಿರುವ ಈ ಸಮಿತಿಗೆ ಜೂನ್ 25ರೊಳಗೆ ವಿವರವಾದ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ.

ಬಿಜೆಪಿ ಮತ್ತು ಜೆಡಿಎಸ್ ಶಾಸಕರಿಂದ ಅಡ್ಡಮತದಾನ ನಡೆದಿರುವುದು ವಿಧಾನ ಪರಿಷತ್ ಚುನಾವಣಾ ಫಲಿತಾಂಶಗಳಿಂದ ಬಹಿರಂಗವಾದ ಬಳಿಕ ಈ ವಿವಾದ ಭುಗಿಲೆದ್ದಿದೆ.

## RSS ದಾಖಲೆಗಳನ್ನು ಸಲ್ಲಿಸದಿದ್ದರೆ ಕಾನೂನು ಕ್ರಮ: ಗೃಹ ಸಚಿವ ಪ್ರಿಯಾಂಕ್ ಖರ್ಗೆ ಸುಳಿವು



ಬೆಂಗಳೂರು: ರಾಷ್ಟ್ರೀಯ ಸ್ವಯಂಸೇವಕ ಸಂಘ(RSS) ನೋಂದಣಿ ಬಗ್ಗೆ ಮಾಹಿತಿ ನೀಡುವಂತೆ ಪಟ್ಟು ಹಿಡಿದಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಸಂಬಂಧಿಸಿದ ದಾಖಲೆಗಳನ್ನು ಸಲ್ಲಿಸದಿದ್ದರೆ ಸಂಘದ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ ಮಂಗಳವಾರ ಸುಳಿವು ನೀಡಿದ್ದಾರೆ.

ನಾನು ಬರೆದ ಪತ್ರಕ್ಕೆ ಆರ್‌ಎಸ್‌ಎಸ್ ನಿಂದ ಯಾವುದೇ ತೃಪ್ತಿದಾಯಕ ಉತ್ತರ ಸಿಗದಿದ್ದರೆ ಕಾನೂನು ಕ್ರಮ ಕೈಗೊಳ್ಳುವುದಾಗಿ ಗೃಹ ಸಚಿವರು ಎಚ್ಚರಿಕೆ ನೀಡಿದ್ದಾರೆ.

ಶತಮಾನಗಳಷ್ಟು ಹಳೆಯದಾದ ಆರ್‌ಎಸ್‌ಎಸ್ ವಿರುದ್ಧ ತಮ್ಮ ವಾಗ್ದಾಳಿಯನ್ನು ಮುಂದುವರೆಸಿದ ಗೃಹ ಸಚಿವರು, ಆರ್‌ಎಸ್‌ಎಸ್ ನೋಂದಣಿ ಬಗ್ಗೆ ಪತ್ರ ಬರೆದು ಸ್ಪಷ್ಟನೆ ಕೇಳಿದ್ದೇನೆ . ಇದೇ ಅಂತಿಮ ಅಲ್ಲ. ಅವರು ಉತ್ತರ ಕೊಡಲಿ. ತಾಳ್ಮೆಯಿಂದ ಕಾಯೋಣ ಎಂದರು.

"ನಾನು ಅವರ ಬಳಿ ವಿವರಗಳನ್ನು ಕೇಳಿ ಕೇವಲ ಒಂದು ವಾರವಾಗಿದೆ. ಅವರು 100 ವರ್ಷಗಳ ಇತಿಹಾಸ ಹೊಂದಿರುವ ದೇಶಭಕ್ತರು. ಅವರು ಎಲ್ಲೋ ದಾಖಲೆಗಳನ್ನು ಇಟ್ಟಿರಬೇಕು. ಅದು ನಾಗ್ಪುರದಲ್ಲಿ, ಬೆಂಗಳೂರಿನ ಕೇಶವ ಶಿಲ್ಪದಲ್ಲಿ ಅಥವಾ ಸರಸಂಘ ಚಾಲಕ್ ಅವರ ನಿವಾಸದಲ್ಲಿ" ಇರಬಹುದು. ಅದನ್ನು ಹುಡುಕಲು ಅವರಿಗೆ ಸಮಯ ಬೇಕು ಅಲ್ವಾ ಎಂದರು.

## ಯೋಗವನ್ನು ಪ್ರತಿದಿನ ಜೀವನದಲ್ಲಿ ಅಳವಡಿಸಿಕೊಳ್ಳಿ: ಶಾಸಕ ಲಕ್ಷ್ಮಣ ಸವದಿ



ಅಥಣಿ: ಯೋಗವು ನಮ್ಮ ಬದುಕಿನಲ್ಲಿ ಹೊಸ ಆಯಾಮವನ್ನು ತಂದುಕೊಡುವುದರ ಜೊತೆಗೆ ರೋಗಮುಕ್ತ ಸಮಾಜ ನಿರ್ಮಾಣಕ್ಕೆ ಮಹತ್ವದ ಕೊಡುಗೆ ನೀಡುತ್ತದೆ. ಆದ್ದರಿಂದ ಯೋಗವನ್ನು ಕೇವಲ ವಿಶ್ವ ಯೋಗ ದಿನಾಚರಣೆಗೆ ಸೀಮಿತಗೊಳಿಸದೆ, ವರ್ಷದ ಎಲ್ಲಾ ದಿನಗಳಲ್ಲೂ ಜೀವನದ ಭಾಗವನ್ನಾಗಿಸಿಕೊಳ್ಳಬೇಕು ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಅವರು ಅಥಣಿ ಪಟ್ಟಣದ ಎಸ್.ಎಸ್.ಎಂ.ಎಸ್. ಕಾಲೇಜು ಆವರಣದಲ್ಲಿ ಹಮ್ಮಿಕೊಂಡಿದ್ದ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕಳೆದ 12 ವರ್ಷಗಳಿಂದ ನಿರಂತರವಾಗಿ ವಿಶ್ವದಾದ್ಯಂತ ಯೋಗ ದಿನಾಚರಣೆಯನ್ನು ಆಚರಿಸಿಕೊಂಡು ಬರುತ್ತಿರುವುದು ಸಂತಸದ ಸಂಗತಿಯಾಗಿದೆ. ಇಂದಿನ ಬದಲಾದ ಆಹಾರ ಪದ್ಧತಿ ಹಾಗೂ ಜೀವನಶೈಲಿಯಿಂದ ಜನರು ವಿವಿಧ ಆರೋಗ್ಯ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ. ಆರೋಗ್ಯಕರ ಮತ್ತು ರೋಗಮುಕ್ತ ಜೀವನ ನಡೆಸಬೇಕಾದರೆ ಪ್ರತಿದಿನ ಯೋಗಾಭ್ಯಾಸವನ್ನು ರೂಢಿಸಿಕೊಳ್ಳುವುದು ಅವಶ್ಯಕ ಎಂದು ಹೇಳಿದರು.

ನಂತರ ಮಾತನಾಡಿದ ತಹಸೀಲ್ದಾರ್ ಸಿದ್ರಾಯ ಬೋಸಗಿ, ಯೋಗವು ಭಾರತೀಯ ಸಂಸ್ಕೃತಿಯ ಅಮೂಲ್ಯ ಕೊಡುಗೆಯಾಗಿದ್ದು, ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ನೆಮ್ಮದಿ ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ ಎಂದರು.

ಇಂದಿನ ಒತ್ತಡದ ಬದುಕಿನಲ್ಲಿ ಯೋಗಾಭ್ಯಾಸ ಅತ್ಯಂತ ಅಗತ್ಯವಾಗಿದ್ದು, ಪ್ರತಿಯೊಬ್ಬರೂ ಪ್ರತಿದಿನ ಸ್ವಲ್ಪ ಸಮಯವನ್ನು ಯೋಗಕ್ಕಾಗಿ ಮೀಸಲಿಡಬೇಕು. ಯೋಗದಿಂದ ದೇಹದ ರೋಗನಿರೋಧಕ ಶಕ್ತಿ ವೃದ್ಧಿಯಾಗುವುದರ ಜೊತೆಗೆ ಮನಸ್ಸಿನ ಏಕಾಗ್ರತೆ ಹೆಚ್ಚುತ್ತದೆ. ವಿದ್ಯಾರ್ಥಿಗಳು, ಯುವಕರು ಹಾಗೂ ಸಾರ್ವಜನಿಕರು ಯೋಗವನ್ನು ತಮ್ಮ ದಿನಚರಿಯ ಭಾಗವನ್ನಾಗಿಸಿಕೊಳ್ಳುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷೆ ಶಿವಲೀಲಾ ಬೂಟಾಳಿ, ಸ್ಥಾಯಿ ಸಮಿತಿ ಅಧ್ಯಕ್ಷ ದತ್ತಾ ವಾಸ್ಟರ್, ಉಪಾಧ್ಯಕ್ಷೆ ಭುವನೇಶ್ವರಿ ಯಂಕಚ್ಚಿ,ಶಿವಾನಂದ ಕಲ್ಲಾಪುರ, ಡಿಎಸ್ಪಿ . ಪ್ರಶಾಂತ ಮುನ್ನೊಳಿ,ಎಂ.ಆರ್.ಮುಂಜಿ, ಅಶೋಕ ಗುಡಿಮನಿ, ಪ್ರವೀಣ ಹುಣಸಿಕಟ್ಟಿ, ಬಿ.ಜಿ.ಕಾಗೆ,ಮಲ್ಲಿಕಾರ್ಜುನ ಮಗದೂಮ , ಸಿ ಪಿ ಐ . ಸ ಂ ತ ೋ ಷ ಹಳ್ಳೂರ,ಡಾ.ಮಲ್ಲಿಕಾರ್ಜುನ ಹಂಜಿ, ರಾಮಣ್ಣ ಧರಿಗೌಡ,ಶಿವಾನಂದ ಮಾಳಗಾಂವಿ,ಸುರೇಶ ಚಿಕ್ಕಟಿ,ವಿವಿಧ ಯೋಗಾಸನಗಳ ಪ್ರದರ್ಶನ ನಡೆಯಿತು. ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಯೋಗಾಭ್ಯಾಸ ಮಾಡಿದರು.

ಅಂತರಾಷ್ಟ್ರೀಯ ಯೋಗ ಗುರುಗಳಾದ ಶ್ರೀ ಭವರಲಾಲ ಆರ್ಯ ಅವರು ಯೋಗಾಸನವನ್ನು ಹೇಳಿ ಕೊಟ್ಟರು.



ಗೋಕಾಕ: ನಗರದ ನ್ಯೂ ಇಂಗ್ಲೀಷ ಸ್ಕೂಲನಲ್ಲಿ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸಿ ಸೇವಾ ನಿವೃತ್ತಿ ಹೊಂದಿದ ಬಿ ಆರ್ ಚಿಪ್ಪಲಕಟ್ಟಿ ಅವರನ್ನು ಅವರ ಹಿತೈಷಿಗಳು ರವಿವಾರದಂದು ಇಲ್ಲಿಯ ಚಿದಂಬರೇಶ್ವರ ಸಭಾ ಭವನದಲ್ಲಿ ಸತ್ಕರಿಸಿದರು. ಈ ಸಂದರ್ಭದಲ್ಲಿ ಶಾಲೆಯ ಚೇರಮನ ಎಸ್ ಆರ್ ಪಂಚಗಾವಿ, ನಾರಾಯಣ ಶರಣರು, ಬಸವರಾಜ ದಳವಾಯಿ, ಎಮ್ ಎ ಅಂಗಡಿ, ಬಸವರಾಜ ಕುಬಸದ, ರವೀಂದ್ರ ದೇಮಶೆಟ್ಟಿ ಬಿ ಬಿ ಪಟಗುಂದಿ, ಬಿ ಎಚ್ ಪಾಟೀಲ, ಶಕುಂತಲಾ ಚಿಪ್ಪಲಕಟ್ಟಿ ಸೇರಿದಂತೆ ಅನೇಕರು ಇದ್ದರು.

## ವಿಶೇಷ ಸತ್ಸಂಗ ಕಾರ್ಯಕ್ರಮ




ಗೋಕಾಕ: ನಗರದ ಶ್ರೀ ಬಸವಾನಂದ ವಚನಾಮೃತ ಸತ್ಸಂಗ ಬಳಗದ ಸಹಯೋಗದಲ್ಲಿ ಶ್ರೀ ಬಸವಾನಂದ ಗುರುಗಳ 75 ವರ್ಷದ ಹುಟ್ಟುಹಬ್ಬದ ಪ್ರಯುಕ್ತ 'ಒಳಗೂ ಬಯಲು, ಹೊರಗೂ ಬಯಲು, ಒಳಹೊರಗೊಂದಾದ ಬಯಲು, ಆದ್ಯಾತ್ಮಿಕ ವಿಷಯದ ಕುರಿತು ತಕ್ಷಣವೇ ಸಾಕ್ಷಾತ್ಕಾರ ಎಂಬ ವಿಶೇಷ ಸತ್ಸಂಗ ಕಾರ್ಯಕ್ರಮಕ್ಕೆ ರವಿವಾರದಂದು ನಗರದ ಜ್ಞಾನ ಮಂದಿರದಲ್ಲಿ ಖ್ಯಾತ ಚಲನಚಿತ್ರ ಹಿರಿಯ ನಟರಾದ ಶ್ರೀಧರ್ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮುರುಘರಾಜೇಂದ್ರ ಮಹಾಸ್ವಾಮಿಗಳು, ಆಧ್ಯಾತ್ಮಿಕ ಪ್ರವಚನಕಾರರಾದ ಶ್ರೀ ಬಸವಾನಂದ ಗುರುಗಳು, ಸುವರ್ಣಾತಾಯಿ ಹೊಸಮಠ, ವಹಿಸಲಿದ್ದು, ಹಿರಿಯ ಸಾಹಿತಿ ಪ್ರೊ. ಚಂದ್ರಶೇಖರ ಅಕ್ಕಿ, ಹಳಿಯಾಳದ ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕ ಅಧ್ಯಕ್ಷರಾದ ಶ್ರೀಮತಿ ಸುಮಂಗಲ ಅಂಗಡಿ, ಮಾದಾರ ಚೆನ್ನಯ್ಯ ಸೇವಾ ಸಮಿತಿ ರಾಜ್ಯಉಪಾಧ್ಯಕ್ಷ ಅರುಣ ದುರ್ಯೋಧನ ಐಹೊಳೆ, ಚಿಕ್ಕೋಡಿಯ ನಿವೃತ್ತ ಉಪನ್ಯಾಸಕ ಎನ್.ವ್ಹಿ. ಸಿರಗಾಂವಕರ್, ಗೋಕಾಕದ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಮಹಾಂತೇಶ ತಾಂವಶಿ, ಸಿರಿಗನ್ನಡ ಮಹಿಳಾ ವೇದಿಕೆ ರಾಜ್ಯಾಧ್ಯಕ್ಷರಾದ ಶ್ರೀಮತಿ ರಜನಿ ನೀರಗ್ಯಾಳ ಸೇರಿದಂತೆ ಅನೇಕ ಉಪಸ್ಥಿತರಿದ್ದರು.

## "ಉದ್ಯಮ ಹಾಗೂ ಶೈಕ್ಷಣಿಕ ಸಂಸ್ಥೆಗಳ ಸಹಭಾಗಿತ್ವದಿಂದ ವಿದ್ಯಾರ್ಥಿಗಳಿಗೆ ಉದ್ಯೋಗ ಭರವಸೆ"



ಮೂಡಲಗಿ: ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಕೈಗಾರಿಕೆಗಳ ಅಗತ್ಯಗಳಿಗೆ ಅನುಗುಣವಾಗಿ ವಿದ್ಯಾರ್ಥಿಗಳು ಕೌಶಲ್ಯಗಳನ್ನು ಬೆಳೆಸಿಕೊಳ್ಳುವುದು ಅತ್ಯಗತ್ಯವಾಗಿದೆ ಎಂದು ಬೆಳಗಾವಿ ಓರಿಯನ್ ಹೈಡ್ರಾಲಿಕ್ಸ್ ಕಂಪನಿಯ ತರಬೇತಿ ಅಧಿಕಾರಿ ಕೃಷ್ಣಾ ಎಸ್. ಮಾಲೋಜಿ ಹೇಳಿದರು.

ಅವರು ಇಲ್ಲಿಯ ಶ್ರೀ ಚೈತನ್ಯ ಸೋಶಿಯಲ್ ವೆಲ್ಫೇರ್ ಸೊಸಾಯಿಟಿಯ ಚೈತನ್ಯ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಬೆಳಗಾವಿಯ ಓರಿಯನ್ ಹೈಡ್ರಾಲಿಕ್ಸ್ ಕಂಪನಿಯ ಸಹಯೋಗದಲ್ಲಿ ಅಪ್ರೆಂಟಿಸ್ ಮೇಳ ಹಾಗೂ ಉದ್ಯಮ ಶೈಕ್ಷಣಿಕ ಸಹಭಾಗಿತ್ವ ಮತ್ತು ಉದ್ಯೋಗ ಭರವಸೆ ಕುರಿತು ತಿಳುವಳಿಕೆ ಒಪ್ಪಂದ ಸಮಾರಂಭದ ಮುಖ್ಯ ಅತಿಥಿ ಸ್ಥಾನದಿಂದ ಮಾತನಾಡಿ, ಉದ್ಯಮ ಹಾಗೂ ಶೈಕ್ಷಣಿಕ ಸಂಸ್ಥೆಗಳ ನಡುವಿನ ಸಹಭಾಗಿತ್ವದಿಂದ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಜ್ಞಾನ, ಗುಣಮಟ್ಟದ ತರಬೇತಿ ಹಾಗೂ ಉದ್ಯೋಗಾವಕಾಶಗಳು ಸುಲಭವಾಗಿ ದೊರೆಯಲಿದ್ದು, ಇಂತಹ ಅಪ್ರೆಂಟಿಸ್ ಮೇಳಗಳು ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣದಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದ ಅವರು ಕಂಪನಿಯ ಉತ್ಪನ್ನಗಳ ಮಹತ್ವ, ಉತ್ಪಾದನಾ ಪ್ರಕ್ರಿಯೆ ಹಾಗೂ ತಯಾರಿಕಾ ಹಂತಗಳ ಕುರಿತು ವಿಡಿಯೋ ಪ್ರದರ್ಶನದ ಮೂಲಕ ಮಾಹಿತಿ ನೀಡಿದರು.

ಕಂಪನಿಯ ಇನ್ಫೋರ್ವ ಅಧಿಕಾರಿ ಕದಮ್ ಅವರು ಮಾತನಾಡಿ, ಸ್ಥಳೀಯ ಪ್ರದೇಶದ ಐಟಿಐ ತರಬೇತಿದಾರರಿಗೆ ತಮ್ಮ ಸಂಸ್ಥೆಯಲ್ಲಿ ಉದ್ಯೋಗಾವಕಾಶ ದೊರೆಯುತ್ತಿರುವುದು ಕಂಪನಿಗೆ ಹೆಮ್ಮೆಯ ವಿಷಯವಾಗಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಚೈತನ್ಯ ಶಾಲೆಯ ಆಡಳಿತಾಧಿಕಾರಿ ಎಸ್. ಎಂ. ಕಮದಾಳ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ಗುಣಮಟ್ಟದ ತಾಂತ್ರಿಕ ಶಿಕ್ಷಣದ ಜೊತೆಗೆ ಉದ್ಯೋಗಾಧಾರಿತ ತರಬೇತಿ ನೀಡುವ ನಿಟ್ಟಿನಲ್ಲಿ ಸಂಸ್ಥೆ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದು, ಕೈಗಾರಿಕೆಗಳೊಂದಿಗೆ ಇಂತಹ ಒಪ್ಪಂದಗಳು ವಿದ್ಯಾರ್ಥಿಗಳ ಉದ್ಯೋಗ ಸಾಧ್ಯತೆಗಳನ್ನು ಮತ್ತಷ್ಟು ವೃದ್ಧಿಸಲಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಚೈತನ್ಯ ಐಟಿಐ ಮತ್ತು ಓರಿಯನ್ ಹೈಡ್ರಾಲಿಕ್ಸ್ ಕಂಪನಿಯ ನಡುವೆ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಈ ಒಪ್ಪಂದದ ಮೂಲಕ ವಿದ್ಯಾರ್ಥಿಗಳಿಗೆ ಕೈಗಾರಿಕಾ ತರಬೇತಿ, ಅಪ್ರೆಂಟಿಸ್ ಅವಕಾಶಗಳು, ಕೌಶಲ್ಯ ಅಬಿವೃದ್ಧಿ ಹಾಗೂ ಉದ್ಯೋಗ ಮಾರ್ಗದರ್ಶನ ಒದಗಿಸುವ ಉದ್ದೇಶ ಹೊಂದಲಾಗಿದೆ.

ಇದೇ ವೇಳೆ ಅಪ್ರೆಂಟಿಸ್ ಹಾಗೂ ಉದ್ಯೋಗ ನೇಮಕಾತಿಗಾಗಿ ಕಂಪನಿಯು ಎರಡನೇ ವರ್ಷದ ತರಬೇತಿದಾರರಿಂದ ಅರ್ಜಿಗಳನ್ನು ಸ್ವೀಕರಿಸಿತು.

ವಿವಿಧ ಟ್ರೇಡ್‌ಗಳ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ, ಕಂಪನಿಯ ಆಯ್ಕೆ ಪ್ರಕ್ರಿಯೆ, ಉದ್ಯೋಗಾವಕಾಶಗಳು ಹಾಗೂ ತರಬೇತಿ ಕುರಿತ ಮಾಹಿತಿಯನ್ನು ಪಡೆದರು.

ಕಾರ್ಯಕ್ರಮದಲ್ಲಿ ಗೋಕಾಕ ಹಾಗೂ ಮೂಡಲಗಿ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಹಕಾರಿ ಸಂಘದ ಅಧ್ಯಕ್ಷ ಯಲಗೌಡ ಬಿ. ಪಾಟೀಲ, ಚೈತನ್ಯ ಸೋಶಿಯಲ್ ವೆಲ್ಫೇರ್ ಸೊಸಾಯಿಟಿಯ ಅಧ್ಯಕ್ಷ ಉದಯಕುಮಾರ ಆರ್. ಜೋಕಿ, ಕರ್ನಾಟಕ ರಾಜ್ಯ ಸಹಕಾರಿ ಪತ್ತಿನ ಮಹಾಮಂಡಳದ ಸದಸ್ಯ ಹಾಗೂ ಚೈತನ್ಯ ಅರ್ಬನ್ ಸೊಸಾಯಿಟಿಯ ಅಧ್ಯಕ್ಷ ತಮ್ಮಣ್ಣ ಬಿ. ಕೆಂಚರಡ್ಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಂಸ್ಥೆಯ ವಿಜಯ ಸಿದ್ದಣ್ಣ ಹೊರಟ್ಟಿ, ಕಂಪನಿಯ ಒತ್ತೋರ್ವ ಅಧಿಕಾರಿ ಕಾಂಬಳೆ, ಐಟಿಐ ಪ್ರಾಚಾರ್ಯ ಎಸ್. ಬಿ. ಕುಳ್ಳೋಳಿ, ಉದ್ಯೋಗ ನಿಯೋಜಕರಾದ ಟಿ. ಆರ್. ಝೂರೆ, ಚೈತನ್ಯ ಶಾಲೆ ಹಾಗೂ ಐಟಿಐ ಸಿಬ್ಬಂದಿ, ತರಬೇತಿದಾರರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಜೂನ್ 28 ರಂದು ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ

ಧಾರವಾಡ: ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಜೂನ್ 28, 2026 ರಂದು ಹಮ್ಮಿಕೊಳ್ಳಲಾಗಿದ್ದು, 0 ರಿಂದ 5 ವರ್ಷದೊಳಗಿನ ಎಲ್ಲ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲಾಗುವುದು. ನಂತರ ಆರೋಗ್ಯ ಕಾರ್ಯಕರ್ತರು ಮನೆ ಮನೆಗೆ ಭೇಟಿ ನೀಡಿ ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಕ್ರಮವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಅವರು ಹೇಳಿದರು.

ಅವರು ಇಂದು (ಜೂ.22) ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ರಾಷ್ಟ್ರೀಯ ಪಲ್ಸ ಪೋಲಿಯೋ 2026 ಕಾರ್ಯಕ್ರಮದ ಜಿಲ್ಲಾ ಮಟ್ಟದ ಟಾಸ್ಕ್‌ಪೋಸ್ ಸಮಿತಿ ಸಭೆ ಜರುಗಿಸಿ, ಮಾತನಾಡಿದರು.

ಪಲ್ಸ್ ಪೋಲಿಯೋ ಕಾರ್ಯಕ್ರಮದಡಿ ಜಿಲ್ಲೆಯ ಎಲ್ಲ ಅರ್ಹ ಮಕ್ಕಳಿಗೆ ಕಡ್ಡಾಯವಾಗಿ ಎರಡು ಹನಿ ಪೋಲಿಯೋ ಲಸಿಕೆ ನೀಡಬೇಕು. ಗ್ರಾಮೀಣ ಪ್ರದೇಶದಲ್ಲಿ ಜೂನ್ 29, 2026 ರಿಂದ ಜೂನ್ 30, 2026 ರವರೆಗೆ ಹಾಗೂ ನಗರ ಪ್ರದೇಶದಲ್ಲಿ ಜೂನ್ 29, 2026 ರಿಂದ ಜುಲೈ 1, 2026 ವರೆಗೆ ಮನೆ ಮನೆ ಭೇಟಿ ಮೂಲಕ ಆರೋಗ್ಯ ಕಾರ್ಯಕರ್ತರು 0–5 ವರ್ಷದ ಮಕ್ಕಳಿಗೆ ಲಸಿಕೆ ನೀಡುವ ಕಾರ್ಯವನ್ನು ಸಮರ್ಪಕವಾಗಿ ಕೈಗೊಳ್ಳಬೇಕು ಎಂದು ಸೂಚಿಸಿದರು.



ಜಿಲ್ಲೆಯಲ್ಲಿ 5 ವರ್ಷದೊಳಗಿನ 2,08,779 ಮಕ್ಕಳಿಗೆ ಲಸಿಕೆ ನೀಡುವ ಗುರಿ ಹೊಂದಲಾಗಿದ್ದು, 889 ಲಸಿಕಾ ಕೇಂದ್ರಗಳಿವೆ. 96 ಟ್ರಾಂಜಿಸ್ಟ್ ತಂಡಗಳು ಹಾಗೂ 57 ಮೊಬೈಲ್ ತಂಡಗಳನ್ನು ನಿಯೋಜಿಸಲಾಗಿದೆ. ಕಾರ್ಯಕ್ರಮಕ್ಕಾಗಿ 3,862 ವ್ಯಾಕ್ಸಿನೇಟರ್ಸ್‌ಗಳು ಮತ್ತು 218 ಮೇಲ್ವಿಚಾರಕರು ಕಾರ್ಯನಿರ್ವಹಿಸಲಿದ್ದಾರೆ ಎಂದು ಅವರು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ವ್ಯಾಪಕ ಪ್ರಚಾರ ಕೈಗೊಳ್ಳಬೇಕು. ಅಂಗನವಾಡಿ ಕೇಂದ್ರಗಳಲ್ಲಿ ಕರಪತ್ರ ಹಾಗೂ ಬ್ಯಾನರ್‌ಗಳನ್ನು ಪ್ರದರ್ಶಿಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು. ಗ್ರಾಮಗಳಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮದ ಕುರಿತು ಅರಿವು ಮೂಡಿಸುವ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಎಂದು ಸಭೆಯಲ್ಲಿ ಸೂಚಿಸಿದರು.

ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕಾಗಿ ಜಿಲ್ಲೆಗೆ ಒಟ್ಟು 189 ವಾಹನಗಳ ಅಗತ್ಯವಿದ್ದು, ವಿವಿಧ ತಾಲೂಕುಗಳಿಗೆ ಅವಶ್ಯಕತೆ ಅನುಸಾರ ವಾಹನಗಳನ್ನು ನಿಯೋಜಿಸಲಾಗುವುದು. ಬಸ್ ನಿಲ್ದಾಣಗಳಲ್ಲಿ ಆರೋಗ್ಯ ಇಲಾಖೆಯ ಖಿಡಿಚಿಟಿಜ ತಂಡಗಳ ಮುಖಾಂತರ ಮಕ್ಕಳಿಗೆ ಲಸಿಕೆ ಹಾಕಲು ಕ್ರಮವಹಿಸಬೇಕು. ಹಾಗೂ ಬಿಆರ್‌ಟಿಎಸ್ ನಿಲ್ದಾಣಗಳಲ್ಲಿ ಹಾಗೂ ರೈಲ್ವೆ ನಿಲ್ದಾಣಗಳಲ್ಲಿ ಪೋಲಿಯೋ ಬೂತ್‌ಗಳನ್ನು ತೆರೆಯುವುದು ಮತ್ತು ನಿಲ್ದಾಣಗಳಲ್ಲಿನ ವಿದ್ಯುತ್ ಮಾಹಿತಿ ಫಲಕದಲ್ಲಿ ಎಲ್ಲ 0–5 ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಹಾಕಿಸಿಕೊಳ್ಳುವಂತೆ ಪ್ರಕಟಣೆ ಹೊರಡಿಸುವಂತೆ ಕ್ರಮವಹಿಸಲು ತಿಳಿಸಿದರು.

ಲಸಿಕೆಯನ್ನು ಸುರಕ್ಷಿತವಾಗಿಡಲು ಹಾಗೂ ಶೀತಲ ಪ್ಯಾಕ್‌ಗಳನ್ನು ತಯಾರಿಸಲು ನಿರಂತರ ವಿದ್ಯುಚ್ಛಕ್ತಿಯ ಅವಶ್ಯಕತೆ ಇರುವುದರಿಂದ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರದ ಪ್ರದೇಶಗಳಲ್ಲಿ ಪಲ್ಸ್ ಪೋಲಿಯೋ ದಿನಾಂಕದ ಹಿಂದಿನ ಒಂದು ವಾರದಿಂದ ಮುಂದಿನ ಮೂರು ದಿನಗಳವರೆಗೆ ವಿದ್ಯುಚ್ಛಕ್ತಿ ನಿರಂತರವಾಗಿ ಸರಬರಾಜು ಮಾಡುವಂತೆ ಅಧಿಕಾರಿಗಳು ಕ್ರಮವಹಿಸಬೇಕು. ಅದರಂತೆ ಆರೋಗ್ಯ ಇಲಾಖೆ, ವಿವಿಧ ಇಲಾಖೆಗಳ ಸಿಬ್ಬಂದಿಗಳು ಅಭಿಯಾನದ ಯಶಸ್ಸಿಗೆ ಕೈಜೋಡಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಪಲ್ಸ್ ಪೋಲಿಯೋ ಅಭಿಯಾನದ ಬಿತ್ತಿಪತ್ರವನ್ನು ಎಲ್ಲ ಅಧಿಕಾರಿಗಳು ಸೇರಿ ಬಿಡುಗಡೆ ಮಾಡಿದರು.

ಸಭೆಯಲ್ಲಿ ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಪರಶುರಾಮ ಎಫ್.ಕೆ., ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಡಾ.ಬಿ.ಆರ್. ಪಾತ್ರೋಟ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಸಂಗಪ್ಪ ಗಾಬಿ, ಆರೋಗ್ಯ ಇಲಾಖೆಯ ಕಾರ್ಯಕ್ರಮ ಅಧಿಕಾರಿ ಡಾ. ಶಶಿಧರ ಕಳಸೂರಮಠ, ಧಾರವಾಡ ತಾಲೂಕಾ ವೈದ್ಯಾಧಿಕಾರಿ ಡಾ.ಕೆ.ಎನ್.ತನುಜಾ, ಡಿ.ಎಮ್.ಓ ಡಾ.ಮಂಜುನಾಥ ಸೊಪ್ಪಿನಮಠ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸನ್ಮಾನ ಸಮಾರಂಭ



ನವಲಗುಂದ: ಇಂದು ಪ್ರತಿಯೊಬ್ಬರಿಗೂ ದೇಶ ಸೇವೆ ಮಾಡಲು ಸಾಕಷ್ಟು ಅವಕಾಶಗಳಿವೆ. ಅದನ್ನು ಸದುಪಯೋಗ ಮಾಡಿಕೊಳ್ಳಬೇಕು. ತಮ್ಮ ಪ್ರಾಣ ಲೆಕ್ಕಿಸದೆ ವೈಯಕ್ತಿಕ ಬದುಕನ್ನು ತ್ಯಾಗ ಮಾಡಿ ಗಡಿಯಲ್ಲಿ ಸೇವೆ ಸಲ್ಲಿಸುವ ಯೋಧರ ಸೇವೆ ನಿಜಕ್ಕೂ ಅನನ್ಯ' ಎಂದು ಮಾಜಿ ಯೋಧ ನಿಂಗಪ್ಪ ಗೋವನಕೊಪ್ಪ ತಿಳಿಸಿದರು.

ತಾಲ್ಲೂಕಿನ ಗುಡಿಸಾಗರ ಗ್ರಾಮದ ಸಾಧು ಶಿವಯೋಗಿ ದೇವಸ್ಥಾನದಲ್ಲಿ ಭಾರತೀಯ ಸೇನೆಗೆ ಆಯ್ಕೆಯಾದ ಗ್ರಾಮದ ಮೂವರು ಯುವಕರಾದ ಶಿವಯೋಗಿ ಜಗದೀಶ ಗುಳೆದ, ಆಕಾಶ ನಿಂಗಪ್ಪ ಮಾಯಣ್ಣರ, ಹಾಗೂ ಹಣಮಂತ ದೇವಪ್ಪ ಮರೆಲ್ಲರ ಅವರುಗಳಿಗೆ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದಲ್ಲಿ ಮಾತನಾಡಿದರು

ಶಿವಯ್ಯ ಮಠಪತಿ, ನಿಜಗುಣಿ ಗಡಾದ, ವಿರೇಶ ಗುಳೇದ,ಫಕ್ಕೀರೇಶ ಪಡೆಸೂರ, ನಾಗಲಿಂಗಪ್ಪ ಉಳ್ಳೆಗಡ್ಡಿ, ಚಿದಾನಂದ ಮುತ್ತಣ್ಣರ, ಪ್ರವೀಣ್ ಪೂಜಾರ ಶಿವಾನಂದ ಗುಡಸಲಮನಿ, ಸೇರಿದಂತೆ ಗ್ರಾಮಸ್ಥರು ಇದ್ದರು.

# ತಾಲೂಕಿನ ಸರ್ಕಾರಿ ಶಾಲಾ ಕೊಠಡಿಗಳ ದುರಸ್ತಿಗೆ ಕ್ರಮ: ತಾಪಂ ಇಓ ಶ್ರೀಧರ್ ಚಿನಗುಂಡಿ ಅವರಿಂದ ಸರ್ಕಾರಿ ಶಾಲೆಗಳ ಪರಿಶೀಲನೆ

ನರಗುಂದ: ನರಗುಂದ ತಾಲೂಕು ಉಸ್ತುವಾರಿ ಕಾರ್ಯದರ್ಶಿಗಳಾದ ರಮೇಶ ಕಳಸದ ಅವರ ನೇತೃತ್ವದಲ್ಲಿ ಇತ್ತೀಚೆಗೆ ನಡೆದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ತಾಲೂಕಿನ ಸರ್ಕಾರಿ ಶಾಲೆಗಳಲ್ಲಿ ಶಿಥಿಲಾವಸ್ಥೆಯಲ್ಲಿರುವ ಕೊಠಡಿಗಳ ದುರಸ್ತಿಗೆ ಕ್ರಮ ಕೈಗೊಳ್ಳುವಂತೆ ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳ ಗಮನಕ್ಕೆ ತರಲಾಗಿತ್ತು.

ಈ ಹಿನ್ನೆಲೆಯಲ್ಲಿ ಇಂದು ನರಗುಂದ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀಧರ್ ಚಿನಗುಂಡಿ ಅವರು ಸುರಕೋಡ, ಹದಲಿ, ರೆಡ್ಡರನಾಗನೂರು ಹಾಗೂ ಶಿರೋಳ ಗ್ರಾಮದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಭೇಟಿ ವೇಳೆ ಶಾಲೆಗಳ ಹಾನಿಗೊಳಗಾದ ಕೊಠಡಿಗಳನ್ನು ಪರಿಶೀಲಿಸಿದ ಅವರು, ಮಳೆಗಾಲದ ಸಂದರ್ಭದಲ್ಲಿ ಶಾಲಾ ಮಕ್ಕಳ ವಿದ್ಯಾಭ್ಯಾಸಕ್ಕೆ ಯಾವುದೇ ತೊಂದರೆ ಉಂಟಾಗುತ್ತಿದೆಯೇ ಹಾಗೂ ಕೊಠಡಿಗಳ ಸುರಕ್ಷತಾ ಸ್ಥಿತಿಗತಿಗಳ ಬಗ್ಗೆ ಮಾಹಿತಿ ಸಂಗ್ರಹಿಸಿದರು. ಮಕ್ಕಳ ಕಲಿಕಾ ಹಿತದೃಷ್ಟಿಯಿಂದ ಶಾಲಾ ಕೊಠಡಿಗಳ ಸುರಕ್ಷತೆ ಕುರಿತು ಶಾಲಾ ಮುಖ್ಯೋಪಾಧ್ಯಾಯರಿಂದ ವಿವರಗಳನ್ನು ಪಡೆದುಕೊಂಡರು.

ಇದೇ ವೇಳೆ ಶಿಕ್ಷಕರ ಹಾಜರಾತಿ ಪುಸ್ತಕ, ವಿದ್ಯಾರ್ಥಿಗಳ ಒಟ್ಟು ಹಾಜರಾತಿ



ಹಾಗೂ ಸೋಮವಾರ ಶಾಲೆಗೆ ಹಾಜರಾದ ಮಕ್ಕಳ ಸಂಖ್ಯೆಯನ್ನು ಪರಿಶೀಲಿಸಿದರು. ಶಿಕ್ಷಕರು ತಮ್ಮ ಚಲನವಲನ ನೋಂದಣಿ (ಮೂವ್ಮೆಂಟ್ ರಿಜಿಸ್ಟರ್)ಯನ್ನು ನಿಯಮಿತವಾಗಿ ನವೀಕರಿಸಿಕೊಂಡು ಇರಬೇಕೆಂದು ಸೂಚಿಸಿದರು.

ಶಾಲಾ ಅಡುಗೆ ಸಿಬ್ಬಂದಿ ಅವರ ಜೊತೆ ಸಮಾಲೋಚನೆ ನಡೆಸಿದ ಇಓ ಅವರು ಬಿಸಿಯೂಟ ನಿರ್ವಹಣೆಯ ನಮೂನೆ–3 ರಜಿಸ್ಟರ್ ನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ರೆಡ್ಡರ ನಾಗನೂರು ಗ್ರಾಮದ ಸೀತಮ್ಮ ದೊಡ್ಡನಗೌಡ್ರ ಪ್ರೌಢ ಶಾಲೆಯ ಅಡುಗೆ ಸಿಬ್ಬಂದಿ ನಮೂನೆ–3 ರಜಿಸ್ಟರ್ ಅಪಡೇಟ್ ಮಾಡದೇ ಇರುವುದು ಇಓ ಅವರ ಗಮನಕ್ಕೆ ಬಂತು. ಅಕ್ಷರ ದಾಸೋಹದ ಸಹಾಯಕ ನಿರ್ದೇಶಕರಿಗೆ ದೂರವಾಣಿ ಕರೆ ಮಾಡಿ ತಾಲೂಕಿನ ಎಲ್ಲ ಶಾಲೆಗಳಲ್ಲಿ ಅಡುಗೆ ಸಿಬ್ಬಂದಿಗಳು ನಿರ್ವಹಿಸುವ ನಮೂನೆ–3 ರಜಿಸ್ಟರ್ ನ್ನು ಅಪಡೇಟ್ ಗೊಳಿಸಲು ಕ್ರಮವಹಿಸಿ ಅಂತ ತಿಳಿಸಿದರು

ನಂತರ ಹದಲಿ ಗ್ರಾಮದ 122ನೇ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ, ರಜೆ ಮೇಲಿದ್ದ ಅಂಗನವಾಡಿ ಕಾರ್ಯಕರ್ತೆಯೊಬ್ಬರು ಹಾಜರಾತಿ ಪುಸ್ತಕದಲ್ಲಿ ಸಹಿ ಮಾಡಿರುವುದು ಗಮನಕ್ಕೆ ಬಂತು. ಈ ಕುರಿತು ದೂರವಾಣಿ ಮೂಲಕ ಸಿಡಿಪಿಓ ಅವರೊಂದಿಗೆ ಮಾತನಾಡಿದ ಇಓ ಶ್ರೀಧರ್ ಚಿನಗುಂಡಿ ಅವರು, ಅನಧಿಕೃತವಾಗಿ ಹಾಜರಾತಿ ದಾಖಲಿಸಿರುವ ಕುರಿತು ಪರಿಶೀಲನೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲು ತಾಲೂಕು ಪಂಚಾಯಿತಿ ಕಚೇರಿಗೆ ವರದಿ ಸಲ್ಲಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ನರಗುಂದ ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಬಿ.ಇ.ಮೇಯೂಟಿ ಮತ್ತು ಶಾಲಾ ಸಿಬ್ಬಂದಿ ಅವರು ಹಾಜರಿದ್ದರು.

# 9 ವರ್ಷ ಕಳೆದರೂ ನಿವೇಶನ ಹಂಚಿಕೆ ಇಲ್ಲ : ಕರ್ನಾಟಕ ಗೃಹ ಮಂಡಳಿ ವಿರುದ್ಧ ಅರ್ಜಿದಾರರ ಆಕ್ರೋಶ



**ಕೊಪ್ಪಳ :** ಕರ್ನಾಟಕ ಗೃಹ ಮಂಡಳಿ ಇಲಾಖೆಯ ಕೊಪ್ಪಳ ವಿಭಾಗದಿಂದ 2017ರಲ್ಲಿ EWS, LIG, HIG, MIG ಹಾಗೂ MIG-I ವರ್ಗದ ನಿವೇಶನಗಳಿಗಾಗಿ ಅರ್ಜಿ ಆಹ್ವಾನಿಸಲಾಗಿತ್ತು. ಅರ್ಜಿದಾರರಿಂದ ಹಣ ಪಡೆದು 18 ತಿಂಗಳೊಳಗೆ ಮೂಲಭೂತ ಸೌಕರ್ಯಗಳೊಂದಿಗೆ ನಿವೇಶನಗಳನ್ನು ಅಭಿವೃದ್ಧಿಪಡಿಸಿ ಹಂಚಿಕೆ ಮಾಡಲಾಗುವುದು ಎಂದು ತಿಳಿಸಲಾಗಿತ್ತು.

ಆದರೆ ಇದೀಗ 9 ವರ್ಷಗಳು ಕಳೆದರೂ ಹಲವಾರು ಅರ್ಜಿದಾರರಿಗೆ ನಿವೇಶನ ಹಂಚಿಕೆ ಆಗಿಲ್ಲ ಎಂದು ಫಲಾನುಭವಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಮಾತನಾಡಿದ ಕಾಶಪ್ಪ ಛಲವಾದಿ, ಕರ್ನಾಟಕ ಗೃಹ ಮಂಡಳಿಯವರು ನಿವೇಶನ ಅಭಿವೃದ್ಧಿಪಡಿಸಿ ನೀಡುವುದಾಗಿ ಭರವಸೆ ನೀಡಿದ್ದರು. 18 ತಿಂಗಳೊಳಗೆ ಅಭಿವೃದ್ಧಿ ಪೂರ್ಣಗೊಳಿಸುವುದಾಗಿ ತಿಳಿಸಿದ್ದರೂ ಇಂದಿಗೂ ಹಲವಾರು ಅರ್ಜಿದಾರರಿಗೆ ನಿವೇಶನ ಸಿಕ್ಕಿಲ್ಲ. ಎರಡು ವರ್ಷಗಳ ನಂತರವೂ ವಿಳಂಬವಾದಾಗ ನಾವು ಪತ್ರದ ಮೂಲಕ ಮಾಹಿತಿ ಕೇಳಿದ್ದೆವು. ನಂತರ ನಮ್ಮಿಂದ ಯಾವುದೇ ಬಡ್ಡಿ ಬೇಡ ಎಂದು ಒಪ್ಪಿಗೆ ಪತ್ರ ಬರೆಸಿಕೊಂಡರು. ಆದರೆ ನಿವೇಶನ ನೀಡುವ ಅವಧಿಯ ಬಗ್ಗೆ ಯಾವುದೇ ಸ್ಪಷ್ಟ ಮಾಹಿತಿ ನೀಡಲಿಲ್ಲ,ಎಂದು ಆರೋಪಿಸಿದರು.

ಅರ್ಜಿದಾರರು 9 ವರ್ಷಗಳಿಂದ ಕಾಯುತ್ತಿದ್ದಾರೆ. ನಾವು ಕಷ್ಟಪಟ್ಟು ಕಟ್ಟಿದ ಹಣವನ್ನು ಇಲಾಖೆಗೆ ಪಾವತಿಸಿದ್ದೇವೆ. ಆದರೆ ನಿವೇಶನವೂ ನೀಡಿಲ್ಲ, ಹಣಕ್ಕೆ ಬಡ್ಡಿಯನ್ನೂ ನೀಡಿಲ್ಲ. ಇದೀಗ ಯಾವುದೇ ಮಾಹಿತಿ ನೀಡದೆ ಮುಂಗಡ ಹಣವನ್ನು ಹಿಂದಿರುಗಿಸುವುದಾಗಿ ಹೇಳುತ್ತಿರುವುದು ನ್ಯಾಯಸಮ್ಮತವಲ್ಲ, ಎಂದು ಅವರು ಹೇಳಿದರು.

ಒಟ್ಟು,202 ಎಕರೆ ಜಮೀನಿನಲ್ಲಿ 52 ಎಕರೆ ಮಾತ್ರ ಅಭಿವೃದ್ಧಿಪಡಿಸಿ ನಿವೇಶನ ಹಂಚಿಕೆ ಮಾಡಲಾಗಿದೆ. ಉಳಿದ ಸುಮಾರು 150 ಎಕರೆ ಜಮೀನಿನಲ್ಲಿ ಬಾಕಿ ಇರುವ ಅರ್ಜಿದಾರರಿಗೆ ನಿವೇಶನಗಳನ್ನು ಹಂಚಿಕೆ ಮಾಡಬೇಕು.

ಅಲ್ಲಿಯವರೆಗೆ ಹೊಸದಾಗಿ ಅರ್ಜಿ ಕರೆಯಬಾರದು, ಎಂದು ಆಗ್ರಹಿಸಿದರು.


ಅರ್ಜಿದಾರರ ಒಪ್ಪಿಗೆ ಇಲ್ಲದೆ ಹಣ ಹಿಂತಿರುಗಿಸುವ ಕ್ರಮ ಕೈಗೊಳ್ಳಬಾರದು. ನಮಗೆ ಭರವಸೆ ನೀಡಿದಂತೆ ನಿವೇಶನ ಒದಗಿಸಬೇಕು. ಇಲ್ಲವಾದಲ್ಲಿ ಎಲ್ಲಾ ಅರ್ಜಿದಾರರನ್ನು ಒಗ್ಗೂಡಿಸಿ ಇಲಾಖೆಯ ವಿರುದ್ಧ ಮಾಧ್ಯಮಗಳ ಸಮ್ಮುಖದಲ್ಲಿ ಉಗ್ರ ಹೋರಾಟ ನಡೆಸಲಾಗುವುದು, ಎಂದು ಕಾಶಪ್ಪ ಛಲವಾದಿ ಎಚ್ಚರಿಸಿದರು.

ಈ ಸಂದರ್ಭದಲ್ಲಿ ನಿರಗಪ್ಪ ಹನುಮಂತಪ್ಪ ಮೂಗಿನ, ಅನ್ನಪೂರ್ಣ ಹಾದಿಮನಿ, ಕೊಟ್ರೇಶ್ ಹನುಮಂತಪ್ಪ ಅಳವಂಡಿ, ಚಿದಾನಂದ ಬಳ್ಳಾರಿ, ಕೃಷ್ಣ ಮಬ್ರುನಕರ್, ಶಾಂತಪ್ಪ ಮರೇಗೌಡ ಬಳ್ಳಾರಿ, ಮಂಜುನಾಥ ಸುಂಕಪ್ಪ ಮುಳ್ಳಾಳ, ಮಂಜುನಾಥ ಹೆಚ್. ಅಳವಂಡಿ, ಬಸಯ್ಯ ಶಿವಯ್ಯ ಹಿರೇಮಠ, ನಾಗರತ್ನ, ನಾಗರತ್ನ ಗಂಡ ಶೇಕಪ್ಪ ಮೊಗಿನ್, ಈರಮ್ಮ ಹೆಚ್. ಬುದುಗೊಂಪಿ, ಗವಿಸಿದ್ದಪ್ಪ ಮಲ್ಲಪ್ಪ ಮುಂಡಾಸದ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಜೂ. 26ರಂದು ಹೆಚ್.ಎಂ. ರೇವಣ್ಣ ಅವರ ಅಧ್ಯಕ್ಷತೆಯಲ್ಲಿ ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆ

ಕೊಪ್ಪಳ: ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ. ರೇವಣ್ಣ ಅವರ ಅಧ್ಯಕ್ಷತೆಯಲ್ಲಿ ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯನ್ನು ಜೂನ್ 26ರಂದು ಅಪರಾಹ್ನ 12 ಗಂಟೆಗೆ ಜಿಲ್ಲಾ ಪಂಚಾಯತ್ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ರಾಜ್ಯಾಧ್ಯಕ್ಷರು, ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯೊಂದಿಗೆ ಚರ್ಚಿಸಲಿದ್ದು, ಜಿಲ್ಲಾ ಉಪಾಧ್ಯಕ್ಷರು, ಸದಸ್ಯರು, ಎಲ್ಲಾ ತಾಲ್ಲೂ ಕುಗಳ ಅಧ್ಯಕ್ಷರು ಮತ್ತು ಇತರೆ ಪದಾಧಿ ಕಾರಿಗಳು ಸಭೆಯಲ್ಲಿ ಪಾಲ್ಗೊ ಳ್ಳಬೇಕು. ಪಂಚ



ಗ್ಯಾರಂಟಿ ಯೋಜನೆ ಗಳಿಗೆ ಸಂಬಂಧಿಸಿದಂತೆ ಜಿಲ್ಲೆಯ ಎಲ್ಲಾ ಅನುಷ್ಠಾನಾ ಇಲಾಖೆಗಳ ಅಧಿಕಾರಿಗಳು ಸೂಕ್ತ ಮಾಹಿತಿಯೊಂದಿಗೆ ಕಡ್ಡಾಯವಾಗಿ ಈ ಸಭೆಗೆ ಹಾಜರಾಗಬೇಕು ಎಂದು ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೋಂದಾಯಿತ ಕ್ರೀಡಾ ಸಂಘ ಸಂಸ್ಥೆಗಳ ನವೀಕರಣಕ್ಕೆ ಸೂಚನೆ

ಕೊಪ್ಪಳ: ಕೊಪ್ಪಳ ಜಿಲ್ಲೆಯ ನೋಂದಾಯಿತ ಕ್ರೀಡಾ ಸಂಘ ಸಂಸ್ಥೆಗಳು ನವೀಕರಣ ಮಾಡಿಕೊಳ್ಳುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿಠ್ಠಲ್ ಜಾಬಗೌಡರ್ ಅವರು ತಿಳಿಸಿದ್ದಾರೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ವಿವಿಧ ಕ್ರೀಡಾ ಚಟುವಟಿಕೆಗಳು ಹಾಗೂ ಕ್ರೀಡಾ ಸಾಮಾಗ್ರಿಗಳ ಸೌಲಭ್ಯಗಳಿಗೆ ಸಂಬಂಧಿಸಿದಂತೆ 2011–12ನೇ ಸಾಲಿನಿಂದ ಪ್ರಸಕ್ತ ಸಾಲಿನವರೆಗೆ ಜಿಲ್ಲಾ ಹಾಗೂ ತಾಲೂಕುಗಳಲ್ಲಿರುವ ವಿವಿಧ ಕ್ರೀಡಾ ಸಂಸ್ಥೆಗಳು ನೋಂದಣಿ ಪ್ರಮಾಣ ಪತ್ರವನ್ನು ಪಡೆಯಲಾಗಿರುತ್ತದೆ. ಆದರೆ, ಈ ಕ್ರೀಡಾ ಸಂಸ್ಥೆಗಳು ಮಾನ್ಯತೆ ಪ್ರಮಾಣ ಪತ್ರ ತೆಗೆದುಕೊಂಡ ನಂತರ ಹಲವು ವರ್ಷಗಳ ಕಾಲ ಇಲಾಖೆಯಲ್ಲಿ ನವೀಕರಣಗೊಂಡಿರುವುದಿಲ್ಲ. ನೋಂದಾಯಿತ ಕ್ರೀಡಾ ಸಂಸ್ಥೆಗಳು ನಿಯಮಿತವಾಗಿ ನಿಗಧಿತ ಅವಧಿಯೊಳಗೆ ನವೀಕರಣ ಮಾಡಿಕೊಳ್ಳದಿದ್ದರೆ, ಕ್ರೀಡಾ ಇಲಾಖೆಯಿಂದ ಚಟುವಟಿಕೆಗಳಿಗೆ ಸಿಗುವಂತಹ ಸೌಲಭ್ಯಗಳನ್ನು ರದ್ದುಗೊಳಿಸಲಾಗುವುದು ಹಾಗೂ ಇದರಿಂದ ಕ್ರೀಡಾಕೂಟಗಳನ್ನು ಆಯೋಜಿಸಲು ಅಥವಾ ಕ್ರೀಡಾ ಸಾಮಾಗ್ರಿಗಳನ್ನು ಖರಿದೀಸಲು ಈ ಸಂಸ್ಥೆಯು ಅಸಿಂಧು ಎಂದು ಪರಿಗಣನೆಗೆ ತೆಗೆದುಕೊಂಡು, ಕ್ರೀಡಾ ಸಂಸ್ಥೆಗೆ ಯಾವುದೇ ಸೌಲಭ್ಯವನ್ನು ನೀಡಲಾಗುವುದಿಲ್ಲ.

ಆದ್ದರಿಂದ ಕ್ರೀಡಾ ಇಲಾಖೆಯಲ್ಲಿ ನೋಂದಾಯಿತ ಕ್ರೀಡಾ ಸಂಸ್ಥೆಗಳು ನವೀಕರಣಕ್ಕಾಗಿ "ಸೇವಾಸಿಂಧು" ಪೋರ್ಟಲ್ ಮುಖಾಂತರ ನವೀಕರಣವನ್ನು ಮಾಡಿ, ನವೀಕರಣಗೊಂಡ ಪ್ರತಿಯನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕೊಪ್ಪಳ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ. ಜಿಲ್ಲಾ ಕ್ರೀಡಾಂಗಣ, ಗದಗ ರಸ್ತೆ, ಕೊಪ್ಪಳ–583231, ದೂರವಾಣಿ ಸಂಖ್ಯೆ: 08539–230121ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಅಮೃತ ಸರೋವರ ದಡದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ

ಕೊಪ್ಪಳ: ಅಂತರಾಷ್ಟ್ರೀಯ ಯೋಗ ದಿನ ಪ್ರಯುಕ್ತ ಗಿಣಿಗೇರಾ ಗ್ರಾಮ ಪಂಚಾಯತಿ ಹಾಗೂ ಕೆರೆ ಅಭಿವೃದ್ಧಿ ಸಮಿತಿ ವತಿಯಿಂದ ಗಿಣಿಗೇರಾ ಗ್ರಾಮದ ಅಮೃತ ಸರೋವರ ದಡದಲ್ಲಿ ಭಾನುವಾರ (ಜೂ. 21ರಂದು) ಯೋಗಭ್ಯಾಸ ಮತ್ತು ಪ್ರಾಣಾಯಮ ಅಭ್ಯಾಸಗಳನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಕುರಿತು ಗಿಣಿಗೇರಿ ಪಂಚಾಯತ ಅಭಿವೃದ್ಧಿ ಅಧಿಕಾರಿ ಮಂಜುಳಾದೇವಿ ಹೂಗಾರ ಅವರು ಮಾತನಾಡಿ, ಪ್ರಸ್ತುತ ದಿನದಲ್ಲಿ ಆಹಾರ ಪದ್ದತಿ ಬಹು ಮುಖ್ಯವಾದದು. ಆಹಾರ ಪದ್ದತಿಯನ್ನು ನಾವು ಬದಲಾವಣೆ ಮಾಡಿಕೊಳ್ಳುವದು ಸೂಕ್ತ. ಬದಲಾವಣೆ ಮಾಡಿಕೊಳ್ಳದೇ ಇದ್ದಲ್ಲಿ ಮುಂದಿನ ದಿನಗಳಲ್ಲಿ ಆರೋಗ್ಯದ ಮೇಲೆ ಪರಿಣಾಮ ಬೀರುವದು ಖಂಡಿತವೆಂದರು.

ಆಧುನಿಕ ಜಗತ್ತಿನಲ್ಲಿರುವ ನಾವುಗಳು ಪ್ರತಿನಿತ್ಯ ಬದುಕಿನಲ್ಲಿ ಒತ್ತಡ ಜೀವನ ಸಾಗಿಸುತ್ತಿದ್ದೆವೆ. ಪ್ರತಿ ದಿನ ನಾವುಗಳು ಆರೋಗ್ಯದಿಂದ ಇರಬೇಕಾದ ದಿನದ 24 ಗಂಟೆಗಳಲ್ಲಿ 01 ಗಂಟೆಯಾದರು ಯೋಗ ಮತ್ತು ಪ್ರಾಣಾಯಮವನ್ನು ರೂಢಿಸಿಕೊಳ್ಳಬೇಕು. ಹಿಂದಿನ ಕಾಲದಲ್ಲಿ ಋಷಿಮುನಿಗಳು ಯೋಗ ಮತ್ತು ಪ್ರಾಣಾಯಮದಿಂದ ಆರೋಗ್ಯವನ್ನು ಗೆಲ್ಲುವದಕ್ಕೆ ಸಾಧ್ಯ ಎಂಬುದನ್ನು ಮನಗಂಡು ಸಾಧನೆಗೈದು ಇತರರಿಗೆ ಮಾದರಿಯಾಗಿದ್ದಾರೆ. ಗ್ರಾಮದ ಕೆರೆಗಳು ಜೀವಂತ ಆಗರಗಳು ಎನ್ನುವ ಪದಕ್ಕೆ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯವು ಅಮೃತ ಸರೋವರ ದಡದಲ್ಲಿ ಯೋಗ ಮತ್ತು ಪ್ರಾಣಾಯಮ ಶಿಬಿರಗಳನ್ನು ಆಯೋಜಿಸಲು ನಿರ್ದೇಶನ ನೀಡಿರುವದು ಕೆರೆಯ ಮಹತ್ವಕ್ಕೆ ಆದ್ಯತೆ ನೀಡಿದೆ ಎಂದರು.

ಯೋಗ ಮತ್ತು ಪ್ರಾಣಾಯಮಕ್ಕೆ ಯಾವುದೇ ರೀತಿಯ ವಯಸ್ಸಿನ ಇತಿಮಿತಿ ಇರುವದಿಲ್ಲ. ಆದರೆ ಕ್ರಮಬದ್ದವಾಗಿ



ಯೋಗಭ್ಯಾಸ ರೂಢಿಸಿಕೊಳ್ಳಬೇಕೆಂದರು.

ಯೋಗ ಅಭ್ಯಾಸ ಮತ್ತು ಪ್ರಾಣಾಯಮ ಭಂಗಿಗಳನ್ನು ಮಾರುತಿ ಚಿತ್ರಗಾರ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಪಂಚಾಯತ ಅಭಿವೃದ್ದಿ ಅಧಿಕಾರಿ ಮಂಜುಳಾದೇವಿ ಹೂಗಾರ, ಗ್ರಾಮಸ್ಥರಾದ ಕೃಷ್ಣಮೂರ್ತಿ ಹಲಗೇರಿ, ನೀಲಪ್ಪ ಮೂರಮನಿ, ಪ್ರೌಢಶಾಲಾ ಮುಖ್ಯೋಪಾಧ್ಯಾಯರಾದ ಸದಾನಂದ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಮಂಜುನಾಥ, ಗ್ರಾಮ ಪಂಚಾಯತಿ ಸಿಬ್ಬಂದಿಗಳಾದ ಈಶ್ವರಯ್ಯ ಪೋಲಿಸ್ ಪಾಟೀಲ, ರಾಜಾ, ರಾಜಾಭಕ್ಷಿ, ಶ್ರೀಕಾಂತ,ಆಶಾ ಕಾರ್ಯಕರ್ತರು, ಶಾಲಾ ಮಕ್ಕಳು, ಶಿಕ್ಷಕರು ಹಾಜರಿದ್ದರು.

# ಮಾದಕ ವ್ಯಸನ ಮುಕ್ತ ಗದಗ ವಾಕಾಥಾನ್-2026 ಕಾರ್ಯಕ್ರಮ

# ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರ ಸಹಕಾರ ಅಗತ್ಯ

ಗದಗ: "ಮಾದಕ ವ್ಯಸನ ಮುಕ್ತ ಸಮಾಜವನ್ನು ನಿರ್ಮಿಸುವುದು ಕೇವಲ ಪೊಲೀಸ್ ಇಲಾಖೆಯಿಂದ ಮಾತ್ರ ಸಾಧ್ಯವಿಲ್ಲ. ಸಾರ್ವಜನಿಕರು ಹಾಗೂ ಯುವಜನತೆ ಕೈಜೋಡಿಸಿದಾಗ ಮಾತ್ರ ಇದನ್ನು ಸಂಪೂರ್ಣವಾಗಿ ಮುಕ್ತಗೊಳಿಸಲು ಸಾಧ್ಯ," ಎಂದು ಬೆಳಗಾವಿ ಉತ್ತರ ವಲಯದ ಐಜಿಪಿ ಸಂದೀಪ್ ಪಾಟೀಲ್ ಅವರು ತಿಳಿಸಿದರು.

ನಗರದ ಅಂತರರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ಮತ್ತು ಕಳ್ಳಸಾಗಣೆ ವಿರೋಧಿ ದಿನಾಚರಣೆಯ ಅಂಗವಾಗಿ, ಗದಗ ಜಿಲ್ಲಾ ಪೊಲೀಸ್ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾಗಿದ್ದ "ಮಾದಕ ವ್ಯಸನ ಮುಕ್ತ ಗದಗ ವಾಕಥಾನ್ 2026" ಕಾರ್ಯಕ್ರಮ ಕುರಿತು ಆಟೋ ಮೂಲಕ ಜನ ಜಾಗೃತಿ ವಾಕಥಾನ್ 2026 ಕಾರ್ಯಕ್ರಮಕ್ಕೆ ಗಾಂಧಿ ಸರ್ಕಲ್ ನಲ್ಲಿ ಸೋಮವಾರ ಜೂನ್ (22) ರಂದು ಹಮ್ಮಿಕೊಂಡಿದ್ದ ಮಾದಕ ವ್ಯಸನ ಮುಕ್ತ ಗದಗ ವಾಕಾಥಾನ್-2026 ಕಾರ್ಯಕ್ರಮಕ್ಕೆ ಹಸಿರು ನಿಶಾನೆ ತೋರಿಸುವ ಮೂಲಕ ಐಜಿಪಿ ಸಂದೀಪ ಪಾಟೀಲ್ ಚಾಲನೆ ನೀಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ನೂರಾರು ಶಾಲಾ-ಕಾಲೇಜು ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿದ ಅವರು, "ಪ್ರತಿಯೊಬ್ಬರ ಜೀವನದಲ್ಲೂ ಡಾಕ್ಟರ್, ಇಂಜಿನಿಯರ್, ಪೊಲೀಸ್ ಅಥವಾ ಕ್ರೀಡಾಪಟು ಆಗಬೇಕೆಂಬ ದೊಡ್ಡ ಕನಸುಗಳಿರುತ್ತವೆ. ಆದರೆ, ಒಮ್ಮೆ ಡ್ರಗ್ಸ್‌ನಂತಹ ದುಶ್ಚಟಗಳಿಗೆ ಬಲಿಯಾದರೆ ಆ ಎಲ್ಲಾ ಕನಸುಗಳು ನುಚ್ಚುನೂರಾಗುತ್ತವೆ. ಹೀಗಾಗಿ ಯುವಜನತೆ ಯಾವುದೇ ಕಾರಣಕ್ಕೂ ಇಂತಹ ವ್ಯಸನಗಳಿಗೆ ಒಳಗಾಗದೆ 'ಮಾದಕ ವಸ್ತುವಿಗೆ ಇಲ್ಲ ಎನ್ನಿ' (ಖಚಿಥಿ ಓಂ ಣಂ ಆಡಿಣಾಥಿ) ಎಂಬ ಪಣವನ್ನು ಜೀವನದುದ್ದಕ್ಕೂ ಅಳವಡಿಸಿಕೊಳ್ಳಬೇಕು," ಎಂದರು.

ಜೂನ್ 26 ರಂದು ಅಂತಾರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಇಲಾಖೆಯು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ವಾರ ಪೂರ್ತಿ ವಿಶೇಷ ಅಭಿಯಾನಗಳನ್ನು ಹಮ್ಮಿಕೊಂಡಿದೆ. "ಡ್ರಗ್ಸ್ ಕಾಯ್ದೆಯಡಿ ಕೇವಲ ಮಾರಾಟಗಾರರಷ್ಟೇ ಅಲ್ಲದೆ, ಮಾದಕ ವಸ್ತುಗಳನ್ನು ಸೇವಿಸುವ ಗ್ರಾಹಕರ (ಅಂಟಿಣಟಜಢಿ) ಮೇಲೂ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು. ಯುವಕರು ಸ್ನೇಹಿತರ ಒತ್ತಡಕ್ಕೆ ಮಣಿದು ಇಂತಹ ಚಟಗಳಿಗೆ ದಾಸರಾಗಬಾರದು. ಸಮಾಜದಲ್ಲಿ ಡ್ರಗ್ಸ್ ಬೇಡಿಕೆ (ಆಜಟಚಿಟಿಜ) ಕಡಿಮೆಯಾದಾಗ, ಅದರ ಮಾರಾಟವೂ ತಾನಾಗಿಯೇ ನಿಲ್ಲುತ್ತದೆ," ಎಂದು ಅವರು ಅಭಿಪ್ರಾಯಪಟ್ಟರು.

ಕಳೆದ ಒಂದು ವರ್ಷದಲ್ಲಿ ಗದಗ ಜಿಲ್ಲಾ ಪೊಲೀಸರು ಮಾದಕ ವಸ್ತುಗಳ ತಡೆಗೆ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ. ಜಿಲ್ಲೆಯಲ್ಲಿ ಒಟ್ಟು 27 ಪ್ರಕರಣಗಳನ್ನು ದಾಖಲಿಸಿ, 52 ಆರೋಪಿಗಳನ್ನು ಬಂಧಿಸಲಾಗಿದೆ. ಅಷ್ಟೇ ಅಲ್ಲದೆ, ಇಡೀ ಉತ್ತರ ವಲಯದ 5 ಜಿಲ್ಲೆಗಳಲ್ಲೇ (ಬೆಳಗಾವಿ, ವಿಜಯಪುರ, ಗದಗ, ಧಾರವಾಡ ಮತ್ತು ಬಾಗಲಕೋಟೆ) ಪ್ರಥಮ ಬಾರಿಗೆ ಗದಗ ಜಿಲ್ಲೆಯಲ್ಲಿ 'ಪಿಟ್ ಎನ್‌ಡಿಪಿಎಸ್' (ಕಖಖಿ ಓಆಕಖ) ಕಾಯ್ದೆಯಡಿ ಅಭ್ಯಾಸ ಬಲ ಉಳ್ಳ ಅಪರಾಧಿಗಳ ವಿರುದ್ಧ ಪ್ರಕರಣ ದಾಖಲಿಸಿ, ಒಂದು ವರ್ಷದವರೆಗೆ ಜೈಲಿಗಟ್ಟುವ ಕಠಿಣ ಕ್ರಮ ಜರುಗಿಸಲಾಗಿದೆ ಎಂದು ಐಜಿಪಿ ಅವರು ಗದಗ ಜಿಲ್ಲಾ ಪೊಲೀಸ್ ಇಲಾಖೆಯ ಕಾರ್ಯವೈಖರಿಯನ್ನು ಶ್ಲಾಘಿಸಿದರು.

ಸಾರ್ವಜನಿಕರು ತಮ್ಮ ಸುತ್ತಮುತ್ತ ಎಲ್ಲಾದರೂ ಮಾದಕ ವಸ್ತುಗಳ ಮಾರಾಟ, ಸೇವನೆ ಅಥವಾ ಗಾಂಜಾ ಬೆಳೆಯುವಿಕೆ ಕಂಡುಬಂದಲ್ಲಿ ತಕ್ಷಣವೇ ಗದಗ ಜಿಲ್ಲಾ ಪೊಲೀಸ್ ಇಲಾಖೆಗೆ ಮಾಹಿತಿ ನೀಡಬೇಕು. ಮಾಹಿತಿ ನೀಡುವವರ ವಿವರಗಳನ್ನು ಗೌಪ್ಯವಾಗಿಡಲಾಗುವುದು ಎಂದು ತಿಳಿಸಿದ ಅವರು, "ನಶೆ ಮುಕ್ತ ಕರ್ನಾಟಕ" ನಿರ್ಮಾಣದ ಈ ಮಹತ್ಕಾರ್ಯದಲ್ಲಿ ಸಾರ್ವಜನಿಕರು ಮತ್ತು ಮಾಧ್ಯಮದವರು ಇಲಾಖೆಯೊಂದಿಗೆ ಕೈಜೋಡಿಸಬೇಕೆಂದು ಎಂದರು.




ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ ಜಗದೀಶ ಮಾತನಾಡಿ ಮಾದಕ ವಸ್ತುಗಳ ದುರ್ಬಳಕೆಯು ಕೇವಲ ಒಬ್ಬ ವ್ಯಕ್ತಿಯ ಮೇಲಷ್ಟೇ ಅಲ್ಲದೆ, ಅವರ ಇಡೀ ಕುಟುಂಬ ಹಾಗೂ ಯುವ ಪೀಳಿಗೆಯ ಭವಿಷ್ಯದ ಮೇಲೆ ಅತ್ಯಂತ ಗಂಭೀರವಾದ ಪರಿಣಾಮ ಬೀರುತ್ತಿದೆ. ಆದ್ದರಿಂದ ಪ್ರತಿಯೊಬ್ಬರೂ ಮಾದಕ ವ್ಯಸನದ ವಿರುದ್ಧ ಧ್ವನಿ ಎತ್ತಬೇಕಾಗಿದೆ," ಎಂದು ತಿಳಿಸಿದರು.

ಯಾವುದೇ ಒಂದು ವೈದ್ಯಕೀಯ ಔಷಧಿಯನ್ನೇ ಆಗಲಿ, ಅದನ್ನು ನಿಗದಿತ ಪ್ರಮಾಣಕ್ಕಿಂತ ಅತಿಯಾಗಿ ಬಳಕೆ ಮಾಡಿದರೆ ಅದು ಔಷಧಿಯಾಗುಳಿಯದೆ ವಿಷವಾಗಿ ಮಾರ್ಪಡುತ್ತದೆ ಎಂಬುದು ನಮಗೆಲ್ಲ ತಿಳಿದಿರುವ ಸತ್ಯ," ಎಂದು ಎಸ್ಪಿ ರೋಹನ್ ಜಗದೀಶ್ ಅವರು ನೆನಪಿಸಿದರು. "ಅದೇ ರೀತಿ ಇತ್ತೀಚಿನ ದಿನಗಳಲ್ಲಿ ಯುವಜನತೆ ಗಾಂಜಾ, ಹಶೀಶ್, ಆಯಿಲ್, ಒಪಿಯಾಡ್ಸ್ ಹಾಗೂ ವಿವಿಧ ಕೆಮಿಕಲ್ ಡ್ರಗ್ಸ್‌ಗಳಂತಹ ಮಾದಕ ವ್ಯಸನಗಳಿಗೆ ತುತ್ತಾಗುತ್ತಿದ್ದಾರೆ. ಇವು ನೇರವಾಗಿ ಅಥವಾ ಪರೋಕ್ಷವಾಗಿ ಮನುಷ್ಯನ ಆರೋಗ್ಯ, ಭವಿಷ್ಯ, ಕುಟುಂಬ ಹಾಗೂ ಆರ್ಥಿಕ ಸ್ಥಿತಿಯನ್ನು ಸಂಪೂರ್ಣವಾಗಿ ಹಾನಿ ಮಾಡಿ ಸಾವು-ನೋವಿಗೆ ದೂಡುತ್ತವೆ," ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಯುವಕರಲ್ಲಿ ಕಾಡುವ 'ಸ್ನೇಹಿತರ ಒತ್ತಡ'ದ (Peer Pressure) ಕುರಿತು ಎಚ್ಚರಿಸಿದ ಎಸ್ಪಿಯವರು, "ಸ್ನೇಹಿತರು ಕೇವಲ 'ಒಂದೇ ಒಂದು ಬಾರಿ ಪ್ರಯತ್ನಿಸಿ ನೋಡು, ಒಮ್ಮೆ ಟ್ರೈ ಮಾಡು' ಎಂದು ಹೇಳುವ ಮಾತಿಗೆ ಮರುಳಾಗಿ ಯಾರೂ ಈ ಒತ್ತಡಕ್ಕೆ ಒಳಗಾಗಬಾರದು. ಏಕೆಂದರೆ, ಕೇವಲ ಒಂದು ಬಾರಿಯ ಬಳಕೆಯೂ ಸಹ ನಿಮ್ಮನ್ನು ಆ ವ್ಯಸನಕ್ಕೆ ದಾಸರನ್ನಾಗಿ (Addicted) ಮಾಡಬಹುದು. ಈ ಚಟ ಮುಂದುವರಿದಲ್ಲಿ ನಿಮ್ಮ ಹಾಗೂ ನಿಮ್ಮ ಇಡೀ ಕುಟುಂಬದ ನೆಮ್ಮದಿ ನಾಶವಾಗುತ್ತದೆ," ಎಂದು ವಿದ್ಯಾರ್ಥಿಗಳಿಗೆ ಕಟು ಸತ್ಯವನ್ನು ಮನವರಿಕೆ ಮಾಡಿಸಿದರು.

ಮಾದಕ ವಸ್ತುಗಳ ವಿರುದ್ಧದ ಹೋರಾಟದಲ್ಲಿ ಸಾರ್ವಜನಿಕರಿಗೆ ಪೊಲೀಸ್ ಇಲಾಖೆಯು ಸದಾ ಬೆಂಬಲ ನೀಡಲಿದೆ ಎಂದು ಭರವಸೆ ನೀಡಿದ ರೋಹನ್ ಜಗದೀಶ್ ಅವರು, "ಕಳೆದ ಒಂದು ವರ್ಷದಿಂದ ಜಿಲ್ಲೆಯಲ್ಲಿ ಮಾದಕ ವಸ್ತುಗಳ ಮಾರಾಟಗಾರರ ವಿರುದ್ಧ ಕಠಿಣ ಕಾನೂನು ಕ್ರಮಗಳನ್ನು ಜರುಗಿಸಿ ಸಾಕಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ. ಅಷ್ಟೇ ಅಲ್ಲದೆ, ಪ್ರಥಮ ಬಾರಿಗೆ ಗದಗ ಜಿಲ್ಲೆಯಲ್ಲಿ 'ಪಿಟ್ ಎನ್‌ಡಿಪಿಎಸ್' (ಕಖಖಿ ಓಆಕಖ) ಕಾಯ್ದೆಯಡಿ ಕುಖ್ಯಾತ ಪೆಡ್ಲರ್ ಒಬ್ಬನ ವಿರುದ್ಧ ಪ್ರಕರಣ ದಾಖಲಿಸಿ, ಅತ್ಯಂತ ಕಠಿಣ ಶಿಕ್ಷೆ ವಿಧಿಸಿ ಆತನನ್ನು ಜೈಲಿಗಟ್ಟಲಾಗಿದೆ," ಎಂದು ಇಲಾಖೆಯ ದೃಢ ನಿರ್ಧಾರವನ್ನು ಪ್ರಶಂಸಿದರು.

ಸಮಾಜದಲ್ಲಿ ಮಾದಕ ವಸ್ತುಗಳ ಸಂಪೂರ್ಣ ನಿರ್ಮೂಲನೆಗೆ ಸಾರ್ವಜನಿಕರಲ್ಲಿ ವ್ಯಾಪಕ ಜಾಗೃತಿ ಮೂಡಿಸುವುದು ಅತ್ಯಗತ್ಯವಾಗಿದ್ದು, ಮುಂಬರುವ ದಿನಗಳಲ್ಲಿ ಗದಗ ಜಿಲ್ಲೆಯನ್ನು ಸಂಪೂರ್ಣ ನಶೆ ಮುಕ್ತವನ್ನಾಗಿಸಲು ಎಲ್ಲರ ಸಹಕಾರ ಕೋರಿ, ಎಲ್ಲರಿಗೂ ಒಳ್ಳೆಯದಾಗಲಿ ಎಂದು ಹಾರೈಸಿದರು.

ಅಪರ ಜಿಲ್ಲಾಧಿಕಾರಿಗಳಾದ ಡಾ. ದುರಗೇಶ್ ಕೆ.ಆರ್ ಮಾತನಾಡಿ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಯ ವತಿಯಿಂದ ಮಾದಕ ವಸ್ತುಗಳ ತಡೆಗೆ ಜಿಲ್ಲಾ ಮಟ್ಟದಲ್ಲಿ ಹಲವಾರು ಕಾರ್ಯಪಡೆಗಳನ್ನು (Taskforce) ರಚಿಸಿ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಆದರೆ, ಕೇವಲ ಕಾನೂನು ಕ್ರಮಗಳಿಂದ ಮಾತ್ರ ಇದನ್ನು ತಡೆಯಲು ಸಾಧ್ಯವಿಲ್ಲ. ಸಮಾಜದಲ್ಲಿ ಇದರ ವಿರುದ್ಧ ವ್ಯಾಪಕ ಜನಜಾಗೃತಿ ಮೂಡಿಸುವುದು ಅತ್ಯಂತ ಅಗತ್ಯವಾಗಿದೆ," ಎಂದು ತಿಳಿಸಿದರು.

ಸಾಮಾಜಿಕ ಕಳಕಳಿಯೊಂದಿಗೆ ನಿರಂತರವಾಗಿ ಇಂತಹ ಉಪಯುಕ್ತ ಜಾಗೃತಿ ಅಭಿಯಾನಗಳನ್ನು ಆಯೋಜಿಸುತ್ತಿರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳನ್ನು (SP) ಶ್ಲಾಘಿಸಿದ ಅವರು, ಅಭಿಯಾನದ ಯಶಸ್ಸಿಗೆ ಕೈಜೋಡಿಸಿರುವ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ, ಕ್ರೀಡಾ ಇಲಾಖೆ ಹಾಗೂ ವಿವಿಧ ಸ್ವಯಂಸೇವಾ ಸಂಸ್ಥೆಗಳ (NGO) ಕಾಳಜಿಯನ್ನು ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾದಕ ವ್ಯಸನದ ವಿರುದ್ಧ ನಡೆದ ಐತಿಹಾಸಿಕ ಹೋರಾಟಗಳನ್ನು ಸ್ಮರಿಸಿದ ಅಪರ ಜಿಲ್ಲಾಧಿಕಾರಿಗಳು, "ಹಿಂದೆ ಇಳಕಲ್‌ನ ಪೂಜ್ಯ ಮಹಾಂತ ಸ್ವಾಮಿಗಳವರು ಧೂಮಪಾನ, ಮದ್ಯಪಾನ ಹಾಗೂ ಮಾದಕ ವಸ್ತುಗಳ ವಿರುದ್ಧ ಮನೆ ಮನೆಗೆ ತೆರಳಿ ಜಾಗೃತಿ ಮೂಡಿಸಿದ್ದರು. 'ನಿಮ್ಮಲ್ಲಿರುವ ಕುಡಿತದ ಚಟ ಹಾಗೂ ದುಶ್ಚಟಗಳನ್ನು ನನ್ನ ಜೋಳಿಗೆಗೆ ಹಾಕಿ' ಎಂದು ಕೇಳುವ ಮೂಲಕ ಇಡೀ ಸಮಾಜದಲ್ಲಿ ದೊಡ್ಡ ಪರಿವರ್ತನೆ ತಂದಿದ್ದರು. ಪ್ರಸ್ತುತ ರಾಜ್ಯ ಸರ್ಕಾರವು ಸಹ ಅಂತಹದ್ದೇ ಕಳಕಳಿಯೊಂದಿಗೆ ಸಮಾಜ ಮುಖಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ," ಎಂದರು.

ಈ ವಾಕಥಾನ್ ದಲ್ಲಿ ಡಿವೈಎಸ್.ಪಿ ಮಹಾಂತೇಶ್ ಸಜ್ಜನ, ಡಿ.ಎಸ್.ಪಿ ಮುರ್ತುಜಾ ಖಾದ್ರಿ, ಕ್ರೀಡಾ ಮತ್ತು ಯುವ ಸಬಲೀಕರಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಜಿಮ್ಸ್ ನರ್ಸಿಂಗ್ ಕಾಲೇಜ್, ಲಯನ್ಸ್ ಕ್ಲಬ್, ಎಎ???ಸ್ ಕಾಲೇಜ್, ಸಂಕಲ್ಪ ನರ್ಸಿಂಗ್ ಕಾಲೇಜ್, ಕೆಎಲ್‌ಇ ಪ್ಯಾರಾಮೆಡಿಕಲ್ ಕಾಲೇಜ್, ಬಸವೇಶ್ವರ ಪ್ಯಾರಾಮೆಡಿಕಲ್ ಕಾಲೇಜ್, ಸಿಎಸ್‌ಐ ನರ್ಸಿಂಗ್ ಕಾಲೇಜ್ ಬೆಟಗೇರಿ, ತೋಂಟದಾರ್ಯ ಎಂಜಿನಿಯರಿಂಗ್ ಕಾಲೇಜ್, ಸರ್ಕಾರಿ ಪದವಿಪೂರ್ವ ಕಾಲೇಜುಗಳು, ಐಎಂಎ ಗದಗ, ವರ್ತಕರ ಸಂಘ ಗದಗ-ಬೆಟಗೇರಿ, ಇನ್ನರ್‌ವ್ಹೀಲ್ ಕ್ಲಬ್, ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ, ಔಷಧಿ ವ್ಯಾಪಾರಿಗಳ ವರ್ತಕರ ಸಂಘ, ಜೈನ್ ಗ್ರೂಪ್ಸ್ ಆಫ್ ಸಖಿ ಸಹೇಲಿ, ರೆಡ್‌ಕ್ರಾಸ್ ಸಂಸ್ಥೆ, ಆರ್.ಡಿ.ಪಿ.ಆರ್ ವಿಶ್ವವಿದ್ಯಾಲಯ, ಸಿಎಸ್‌ಐ ಆಸ್ಪತ್ರೆ ಹಾಗೂ ಜೆಟಿ ಕಾಲೇಜಿನ ವಿದ್ಯಾರ್ಥಿಗಳು ಮತ್ತು ಪದಾಧಿಕಾರಿಗಳು ಹಾಜರಿದ್ದರು.

ಈ ವಾಕಥಾನ್ ವು ಗಾಂಧಿ ಸರ್ಕಲ್ ದಿಂದ ಪ್ರಾರಂಭವಾಗಿ ರೋಟರಿ ಸರ್ಕಲ್ ಮಾರ್ಗವಾಗಿ ಭೂಮರೆಡ್ಡಿ ಸರ್ಕಲ್, ಹಳೆ ಡಿಸಿ ಆಫೀಸ್, ಬಸವೇಶ್ವರ ಮೂರ್ತಿ ಭೀಷ್ಮಕೆರೆ ವರೆಗೆ ಬಂದು ತಲುಪಿತು. ಮಾದಕ ವ್ಯಸನ ಮುಕ್ತ ಗದಗ ವಾಕಾಥಾನ್-2026 ಕುರಿತು ಜಾಗೃತಿ ಮೂಡಿಸಿದ ಈ ವಾಕಥಾನ್ ನಗರದ ಪ್ರಮುಖ ರಸ್ತೆಗಳ ಮೂಲಕ ಸಂಚರಿಸಿತು. ವಾಕಥಾನ್ ದಲ್ಲಿ ಪಾಲ್ಗೊಂಡಿದ್ದ ಗದಗ ಜಿಲ್ಲೆಯ ಸಾರ್ವಜನಿಕರೇ, ಕ್ರೀಡಾ ಪಟುಗಳೆ, ವಿದ್ಯಾರ್ಥಿಗಳೆ ಎಲ್ಲಾ ಇಲಾಖೆಯ ನೌಕರರೇ ಕಾರ್ಯಕ್ರಮದಲ್ಲಿ ಭಾಗವಹಿಸಿ ಗದಗ ಜಿಲ್ಲೆಯನ್ನು ಮಾದಕ ವ್ಯಸನ ಮುಕ್ತಗೊಳಿಸೋಣ... ಮಾದಕ ವ್ಯಸನ ಜೀವನ ಮಸಣ, ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಾಣ ನಮ್ಮೆಲರ ಜವಾಬ್ದಾರಿ, ಕಾನೂನು ಪಾಲಿಸಿ ಸುರಕ್ಷಿತ ಜೀವನ ಸಾಗಿಸಿ, ಮಾದಕ ವ್ಯಸನ ಮುಕ್ತ ಅಭಿಯಾನಕ್ಕೆ ಜಯವಾಗಲಿ,ಮಾದಕ ವ್ಯಸನೀಯ ಬದುಕು ಕಗ್ಗತ್ತಲಿನ ಬದುಕು, ನಮ್ಮೆಲ್ಲರ ನಡೆ ಮಾದಕ ವ್ಯಸನ ಮುಕ್ತದ ಕಡೆ" ಎಂಬ ಘೋಷವಾಕ್ಯದೊಂದಿಗೆ ಸಾಗಿದ ಜಾಥಾ ಸಾರ್ವಜನಿಕರ ಗಮನ ಸೆಳೆಯಿತು. ವಿದ್ಯಾರ್ಥಿಗಳು ಘೋಷಣಾ ಫಲಕಗಳನ್ನ ಹಿಡಿದು ಮಾದಕ ವ್ಯಸನ ಮುಕ್ತ ಗದಗ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

## ಯೋಗದಿಂದ ಆರೋಗ್ಯಕರ ಜೀವನ ಸಾಧ್ಯ: ಪ್ರಧಾನ ಅಂಚೆ ಪಾಲಕ ನಾಯ್ಕರ

ಗದಗ: ಪ್ರತಿದಿನ ಯೋಗ ಮಾಡುವದರಿಂದ ಮಾನಸಿಕ ದೈಹಿಕ ಹಾಗೂ ಆಧ್ಯಾತ್ಮಿಕ ಆರೋಗ್ಯಕರ ಜೀವನ ಪಡೆಯಲು ಸಾಧ್ಯವಾಗಲಿದೆ ಎಂದು ಪ್ರಧಾನ ಅಂಚೆ ಪಾಲಕರಾದ ಶರಣಪ್ಪ ನಾಯ್ಕರ ಹೇಳಿದರು.

ಭಾರತೀಯ ಅಂಚೆ ಇಲಾಖೆಯ ಗದಗ ವಿಭಾಗೀಯ ಕಚೇರಿ ಹಾಗೂ ಮನರಂಜನಾ ಕೂಟದ ಆಶ್ರಯದಲ್ಲಿ ಭಾನುವಾರ ಪ್ರಧಾನ ಅಂಚೆ ಕಚೇರಿಯಲ್ಲಿ ಈಶ್ವರಿ ವಿಶ್ವವಿದ್ಯಾಲಯದ ಅಕ್ಕ ಅವರ ಮಾರ್ಗದರ್ಶನದಲ್ಲಿ ಏರ್ಪಡಿಸಲಾಗಿದ್ದ ಅಂತರರಾಷ್ಟ್ರೀಯ ಯೋಗ ದಿನದಲ್ಲಿ ಪಾಲ್ಗೊಂಡು ಚಾಲನೆ ನೀಡಿ ಅವರು ಮಾತನಾಡಿ, ಯೋಗಾಭ್ಯಾಸದಿಂದ ದೇಹದ ಲವಲವಿಕೆ ಹೆಚ್ಚುತ್ತದೆ, ಒತ್ತಡ ಕಡಿಮೆಯಾಗುತ್ತದೆ, ಮನಸ್ಸು ಶಾಂತವಾಗುತ್ತದೆ ಹಾಗೂ ಏಕಾಗ್ರತೆ ವೃದ್ಧಿಯಾಗುತ್ತದೆ ಎಂದರು.



ಇಂದಿನ ವೇಗದ ಜೀವನದಲ್ಲಿ ಯೋಗವು ಮಾನಸಿಕ ನೆಮ್ಮದಿ ಮತ್ತು ದೈಹಿಕ ಸದೃಢತೆಯನ್ನು ಕಾಪಾಡುವ ಪರಿಣಾಮಕಾರಿ ಸಾಧನವಾಗಿದೆ ಎಂದರು.

ರೋಣ ಉಪ ವಿಭಾಗದ ಅಂಚೆ ನಿರೀಕ್ಷ ವೆಂಕಟೇಶರಡ್ಡಿ ಕೊಳ್ಳಿ ಅವರು ಮಾತನಾಡಿ, ಮಾನಸಿಕ ಮತ್ತು ದೈಹಿಕ ಆರೋಗ್ಯಕ್ಕೆ ಪ್ರತಿಯೊಬ್ಬರಿಗೂ ಯೋಗದ ಅಗತ್ಯವಿದೆ ಎಂದರು.

ದಿನನಿತ್ಯ ಯೋಗ ಅಭ್ಯಾಸ ರೂಢಿಸಿಕೊಳ್ಳಬೇಕು. ಇದರಿಂದ ರೋಗ-ರುಜಿನಗಳಿಂದ ದೂರವಿರಲು ಅನುಕೂಲವಾಗಿದೆ. ಅಷ್ಟೇ, ಅಲ್ಲದೇ ಯೋಗದಿಂದ ವೈಯಕ್ತಿಕ ಆರೋಗ್ಯವೃದ್ಧಿ ಯಾಗುವುದಲ್ಲದೆ ವ್ಯಕ್ತಿಯ ಸರ್ವತೋ ಮುಖ ಅಭಿವೃದ್ಧಿಗೂ ಪೂರಕವಾಗಲಿದೆ. ಹೀಗಾಗಿ ಎಲ್ಲರೂ ಯೋಗಾಭ್ಯಾಸವನ್ನು ಪ್ರತಿ ದಿನ ಕುಟುಂಬ ಸಮೇತ ಕೆಲವು ಗಂಟೆ ಯೋಗಭ್ಯಾಕ್ಕೆ ನೀಡಲು ಮುಂದಾಗಬೇಕು ಎಂದರು.

ಬ್ರಹ್ಮ ಕುಮಾರಿ ಸಾವಿತ್ರಿ ಅಕ್ಕ ಯೋಗ ಶಿಬಿರ ನಡೆಸಿ,ಯೋಗವು ಪ್ರಾಚೀನ ಭಾರತದ ಅಮೂಲ್ಯ ಕೊಡುಗೆಯಾಗಿದೆ. ನಮ್ಮ ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಸುವಲ್ಲಿ ಯೋಗದ ಪಾತ್ರ ಮಹತ್ವದ್ದು. ಪ್ರತಿವರ್ಷ ಒಂದೊಂದು ಥೀಮ್‌ನಲ್ಲಿ ಯೋಗ ದಿನವನ್ನು ಆಚರಿಸಲಾಗುತ್ತದೆ. ಈ ವರ್ಷ ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ ಎಂಬ ಥೀಮ್ ಆಗಿದೆ. ಹಾಗಾಗಿ ಯೋಗದಿಂದ ಆರೋಗ್ಯ, ಪ್ರಾಣಾಯಾ ಮದಿಂದ ಮನಶಾಂತಿ, ಜ್ಞಾನದಿಂದ ಜೀವನದ ಸಾರ್ಥಕತೆ ದೊರೆಯುತ್ತದೆ. ಯೋಗವನ್ನು ಪ್ರತಿದಿನ ಅಭ್ಯಾಸ ಮಾಡುವುದರಿಂದ ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಬೆಳವಣಿಗೆ ಪಡೆಯಲು ಪ್ರತಿಯೊಬ್ಬರು ಸಂಕಲ್ಪ ತೋರಬೇಕು ಎಂದರು.

ಯೋಗವು ಕೇವಲ ದೈಹಿಕ ವ್ಯಾಯಾಮವಲ್ಲ. ಅದು ದೇಹ, ಮನಸ್ಸು, ಆತ್ಮ ಮತ್ತು ಚೇತನದ ಸಮನ್ವಯ ಸಾಧಿಸುವ ಜೀವನ ವಿಧಾನವಾಗಿದೆ. ಯೋಗಾಸನಗಳು ದೇಹವನ್ನು ಆರೋಗ್ಯವಂತ ಹಾಗೂ ಬಲಿಷ್ಠವಾಗಿಸಿದರೆ, ಪ್ರಾಣಾಯಾಮ ಮನಸ್ಸಿಗೆ ಶಾಂತಿ ಮತ್ತು ಸ್ಥಿರತೆಯನ್ನು ನೀಡುತ್ತದೆ. ಧ್ಯಾನವು ಆತ್ಮಜ್ಞಾನವನ್ನು ಬೆಳೆಸಿ ಚೇತನವನ್ನು ಉನ್ನತ ಮಟ್ಟಕ್ಕೆ ಬೆಳೆಸಲು ಸಹಕಾರಿಯಾಗಿವೆ ಎಂದರು. ಇದೇ ವೇಳೆ ಯೋಗದಲ್ಲಿ ಪಾಲ್ಗೊಂ ಡಿದ್ದವರಿಗೆ ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ ಹೆಸರಿನಲ್ಲಿ ಸಂಕಲ್ಪ ಭೋಧಿಸಿದರು.

ಅಂಚೆ ಕಚೇರಿಗಳಲ್ಲಿ ಯೋಗ ಶಿಬಿರಗಳು, ಪರಿಸರ ದಿನಾಚರಣೆ, ಜನರಲ್ಲಿ ಜಾಗೃತಿ ವಿವಿಧ ಪ್ರದರ್ಶನಗಳು ಮತ್ತು ಅರಿವು ಮೂಡಿಸುವ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಆಯೋಜನೆ ಮಾಡುತ್ತಿರುವದು ಸಂತಸ ತಂದಿದೆ ಎಂದರು. ಉಪ ಅಂಚೆ ಪಾಲಕರಾದ ಡಿ.ಜಿ.ಮ್ಯಾ ಗೇರಿ, ಬ್ರಹ್ಮಕುಮಾರಿ ಬಿ.ಕೆ. ಮಮತಾ ಅಕ್ಕ, ಶ್ರೀಮತಿ ಶೋಭಾ ಬೆಂಗಳೂರ ಹಾಗೂ ವಿವಿಧ ಅಂಚೆ ಇಲಾಖೆ ಸಿಬ್ಬಂದಿ ಪಾಲ್ಗೊಂಡಿದ್ದರು. ವೆಂಕಟೇಶ ಆಕಳವಾಡಿ ನಿರೂಪಿಸಿ, ವಂದಿಸಿದರು.

## ಯೋಗ ಭಾರತೀಯ ಪ್ರಾಚೀನ ಪರಂಪರೆಯ ಅತ್ಯಮೂಲ್ಯ ಕೊಡುಗೆಯಾಗಿದೆ. ಪ್ರತಿ ದಿನ ಪ್ರತಿಯೊಬ್ಬರೂ ಯೋಗ ಮಾಡಿ ಆರೋಗ್ಯವಾಗಿರಿ: ರಮೇಶ ಅಳಗುಂಡಿ



ಗೋಕಾಕ: ಯೋಗ ಭಾರತೀಯ ಪ್ರಾಚೀನ ಪರಂಪರೆಯ ಅತ್ಯಮೂಲ್ಯ ಕೊಡುಗೆಯಾಗಿದೆ. ಪ್ರತಿ ದಿನ ಪ್ರತಿಯೊಬ್ಬರೂ ಯೋಗ ಮಾಡಿ ಆರೋಗ್ಯವಾಗಿರಿ ಎಂದು ಗೋಕಾಕ ತಾಲೂಕಿನ ಬೆಟಗೇರಿ ವಿವಿಡಿ ಸರ್ಕಾರಿ ಪ್ರೌಢ ಶಾಲೆಯ ಮುಖ್ಯೋಪಾಧ್ಯಯ ರಮೇಶ ಅಳಗುಂಡಿ ಹೇಳಿದರು.

ತಾಲೂಕಿನ ಬೆಟಗೇರಿ ಗ್ರಾಮದ ವಿವಿಡಿ ಸರ್ಕಾರಿ ಪ್ರೌಢ ಶಾಲೆಯ ಆವರಣದಲ್ಲಿ ಜೂ.21ರಂದು ನಡೆದ ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಭಾರತ ದೇಶ ವಿಶ್ವಕ್ಕೆ ಯೋಗದ ಕೊಡುಗೆ ನೀಡಿದೆ. ಪ್ರತಿದಿನ ಯೋಗ ಮಾಡಿದರೆ ರೋಗವಿಲ್ಲ. ಮನುಷ್ಯನಿಗೆ ಯೋಗದಿಂದ ದೊರಕುವ ವಿವಿಧ ಪ್ರಯೋಜನಗಳ ಕುರಿತು ಶಾಲಾ ಮಕ್ಕಳಿಗೆ ತಿಳಿಸಿದರು.

ಸುಮಾರು ಗಂಟೆಗಳ ಕಾಲ ಸ್ಥಳೀಯ ಪ್ರೌಢ ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು, ಸಿಬ್ಬಂದಿ ವರ್ಗದವರು ವಿವಿಧ ಭಂಗಿಯ ಯೋಗಗಳನ್ನು ಮಾಡಿದ ಬಳಿಕ ಎಲ್ಲರಿಗೂ ಸಿಹಿ ವಿತರಿಸಲಾಯಿತು.

ಶಾಲೆಯ ಶಿಕ್ಷಕರಾದ ಪ್ರಕಾಶ ಕುರಬೇಟ, ರಾಕೇಶ ನಡೋಣಿ, ಶುಭಾ.ಬಿ., ಈರಣ್ಣ ಪಟಗುಂದಿ, ಈಶ್ವರ ಮುನವಳ್ಳಿ, ಗಣಪತಿ ಭಾಗೋಜಿ, ವೈ.ಎಂ. ವಗ್ಗರ, ಭಾಗ್ಯಶ್ರೀ ನಾಯಕ, ಶುಭಾ.ಬಿ., ಮಲ್ಹಾರಿ ಪೋಳ ಸೇರಿದಂತೆ ಸಹ ಶಿಕ್ಷಕರು, ಅತಿಥಿ ಶಿಕ್ಷಕರು, ಸಿಬ್ಬಂದಿವರ್ಗ, ವಿದ್ಯಾರ್ಥಿಗಳು ಇದ್ದರು.

## ಜುಲೈ 11 ರಂದು ರಾಷ್ಟ್ರೀಯ ಲೋಕ ಅದಾಲತ್; ಸಂಚಾರಿ ಇ-ಚಲನ್ ಹಾಗೂ ಸಾರಿಗೆ ಇಲಾಖೆಯಲ್ಲಿನ ಬಾಕಿ ಪ್ರಕರಣಗಳ ದಂಡದಲ್ಲಿ ಶೇ.50 ರಷ್ಟು ರಿಯಾಯಿತಿ



ಧಾರವಾಡ: ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳು, ವ್ಯಾಜ್ಯ ಪೂರ್ವ ಪ್ರಕರಣಗಳು ಹಾಗೂ ರಾಜೀ ಆಗಬಹುದಾದ ಪ್ರಕರಣಗಳನ್ನು ಶೀಘ್ರ ಇತ್ಯರ್ಥಗೊಳಿಸುವ ಉದ್ದೇಶದಿಂದ ಜುಲೈ 11, 2026 ರಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ವಿ. ವಿಜಯ್ ಅವರು ಹೇಳಿದರು.

ಇಂದು (ಜೂ.22) ಮಧ್ಯಾಹ್ನ ಧಾರವಾಡ ಜಿಲ್ಲಾ ನ್ಯಾಯಾಲಯದ 2ನೇ ಮಹಡಿಯಲ್ಲಿರುವ ಕಾನ್ಫರೆನ್ಸ್ ಹಾಲ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಸರ್ಕಾರವು ಜೂನ್ 4, 2026 ರಂದು ಹೊರಡಿಸಿದ ಆದೇಶದಂತೆ, ಮೇ-2026 ರ ಮೊದಲು ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತ ಹಾಗೂ ಸಾರಿಗೆ ಇಲಾಖೆಯಲ್ಲಿ 1991 ರಿಂದ 2022 ರ ಅವಧಿಯಲ್ಲಿ ದಾಖಲಾಗಿರುವ ಬಾಕಿ ದಂಡದ ಪ್ರಕರಣಗಳ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಲಾಗಿದೆ ಎಂದರು.

ಈ ರಿಯಾಯಿತಿಯನ್ನು ಪಡೆಯಲು ಜೂನ್ 21 ರಿಂದ ಜುಲೈ 10, 2026 ರವರೆಗೆ 20 ದಿನಗಳ ಕಾಲಾವಕಾಶ ಕಲ್ಪಿಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಂಡು ಬಾಕಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಅಲ್ಲಪ್ಪ ಎಂ.ಬಡಿಗೇರ, ಸಹಾಯಕ ಪೊಲೀಸ್ ಆಯುಕ್ತ (ACP) ವಿರೇಶ್, ಟ್ರಾಫಿಕ್ ಟೌನ್ ಆಫೀಸರ್ (ಖಖಿಔ) ಶ್ರೀಧರ್ ಮಲ್ಹಾಡ ಇದ್ದರು.

## ವಿವಿಧ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗೆ ಅರ್ಜಿ ಆಹ್ವಾನ

ಧಾರವಾಡ: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವೈದ್ಯಾಧಿಕಾರಿ, ಶುಶ್ರೂಷಕಿ, ಪ್ರಯೋಗಶಾಲಾ ತಂತ್ರಜ್ಞರು ಮತ್ತು ಆರೋಗ್ಯ ನಿರೀಕ್ಷಣಾಧಿಕಾರಿಗಳನ್ನು ಧಾರವಾಡ ಜಿಲ್ಲೆಯ ನಮ್ಮ ಕ್ಲಿನಿಕ್‌ಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಹೆಚ್ಚಿನ ಮಾಹಿತಿ ಹಾಗೂ ಅರ್ಜಿಗಳನ್ನು ಭರ್ತಿ ಮಾಡಲು https://dharwad.nic.in ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಗೆ ಸಂಪರ್ಕಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 11 ರಂದು ರಾಷ್ಟ್ರೀಯ ಲೋಕ ಅದಾಲತ್
# ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಅವಕಾಶ: ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧಿಶೆ ಶ್ರೀಮತಿ ನಾಗವೇಣಿ



ಗದಗ: ಗದಗ ಜಿಲ್ಲೆಯಲ್ಲಿ ಜುಲೈ 11 ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಂಡಿದ್ದು ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳಲು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ತಮ್ಮ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥ ಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧಿಶರು ಹಾಗೂ ಜಿಲ್ಲಾ ಕಾನೂನು ಸೇವೆಗಳಪ್ರಾಧಿಕಾರದ ಅಧ್ಯಕ್ಷರಾದ ಶ್ರೀಮತಿ ನಾಗವೇಣಿ ತಿಳಿಸಿದರು.

ನಗರದ ಜಿಲ್ಲಾ ಸತ್ರ ನ್ಯಾಯಾಲಯದ ವಿಡಿಯೋ ಕಾನ್ಫರನ್ಸ್ ಹಾಲ್‌ದಲ್ಲಿ ಮಂಗಳವಾರ ಜೂನ್ (23) ರಂದು ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಲೋಕ ಅದಾಲತ್ ಕುರಿತು ಪತ್ರಿಕಾಗೋಷ್ಟಿಯನ್ನುದ್ದೇಶಿಸಿ ಮಾತನಾಡಿದರು.

ಸಾರ್ವಜನಿಕರು ಮತ್ತು ವ್ಯಾಜ್ಯಕಾರರು ತಮ್ಮ ನ್ಯಾಯಾಲಯಗಳಲ್ಲಿ ಬಾಕಿ ಇರುವ ಹಾಗೂ ನ್ಯಾಯಾಲಯದ ಹೊರಗಿನ (ಪ್ರೀ-ಲಿಟಿಗೇಷನ್) ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಸೌಹಾರ್ದಯುತವಾಗಿ ಬಗೆಹರಿಸಿಕೊಳ್ಳಲು ಇದೊಂದು ಉತ್ತಮ ಅವಕಾಶವಾಗಿದೆ ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮತ್ತು ರಾಜಿ ಸಂಧಾನದಲ್ಲಿ ಪ್ರಕರಣ ಇತ್ಯರ್ಥವಾದರೆ ನ್ಯಾಯಾಲಯಕ್ಕೆ ತುಂಬಿದ ಶುಲ್ಕವನ್ನು ಸಂಪೂರ್ಣ ಮರುಪಾವತಿ ಮಾಡಲಾಗುವುದು ಹಾಗೂ ಪ್ರಕರಣ ರಾಜೀ ಆದಲ್ಲಿ ಉಭಯ ಪಕ್ಷಗಾರರಿಗೆ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲ ಇಲ್ಲಿಗೆ ಪ್ರಕರಣ ಮುಕ್ತಾಯಗೊಂಡು ತಮ್ಮ ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ಸಹಾಯಕವಾಗುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀಮತಿ ನಾಗವೇಣಿ ಅವರು ತಿಳಿಸಿದರು.

ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಪ್ರತಿಯೊಂದು ನ್ಯಾಯಾಲಯಕ್ಕೆ ಒಂದು ಬೆಂಚಿನಂತೆ ಒಟ್ಟು 15 ಬೆಂಚಗಳನ್ನು ರಚಿಸಿದ್ದು ಗದಗ ಜಿಲ್ಲೆಯಲ್ಲಿ ಒಟ್ಟು 21011 ವಿವಿಧ ಚಾಲ್ತಿ ಪ್ರಕರಣಗಳಿದ್ದು ಅದರಲ್ಲಿ ಈಗಾಗಲೇ ರಾಜೀ ಆಗಬಹುದಾದ 2835 ಪ್ರಕರಣಗಳನ್ನು ಗುರುತಿಸಿದ್ದು ಇದರಲ್ಲಿ ಸಿವಿಲ್ ದಾವೆಗಳು ಅಂದರೆ ಜಮೀನುಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು ಮನೆ ಹಾಗೂ ನಿವೇಶನಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಮರಳು ಕಳ್ಳ ಸಾಗಾಣಿಕೆ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು, ಮೋಟರ್ ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜೀಗಾಗಿ ಗುರುತಿಸಲಾಗಿರುತ್ತದೆ ಎಂದರು.

ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನ ಒಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು, ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು. ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು ಜುಲೈ 11 ರಂದು ಜರಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ ಎಂದು ಹೇಳಿದರು.

ಪಕ್ಷಗಾರರು ನ್ಯಾಯಾಲಯಗಳಲ್ಲಿರುವ ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಿ ಎಂದು ಈ ಮೂಲಕ ಕರೆ ನೀಡಿದರು.

ಕಳೆದ ಮಾರ್ಚ-2026 ರಂದು ಜರುಗಿದ ಲೋಕ ಅದಾಲತ್ ನಲ್ಲಿ 3383 ಚಾಲ್ತಿ ಪ್ರಕರಣಗಳನ್ನು ಹಾಗೂ 62299 ವ್ಯಾಜ್ಯಪೂರ್ವ ಪ್ರಕರಣಗಳನ್ನು ಸೇರಿ ಒಟ್ಟು 65682 ಪ್ರಕರಣಗಳು ರಾಜೀ ಮೂಲಕ ಇತ್ಯರ್ಥಪಡಿಸಿದೆ. ಇದರಲ್ಲಿ ವಿಶೇಷವಾಗಿ 03 ಕೌಟುಂಬಿಕ ಪ್ರಕರಣಗಳನ್ನು ಪುನಃ ಒಂದುಗೂಡಿಸಿ ಕಳುಹಿಸಲಾಗಿದೆ ಎಂದರು.

ಕಳೆದ ಮಾರ್ಚ್ 26 ರಂದು ನಡೆದ ಲೋಕ ಅದಾಲತ್‌ನಲ್ಲಿ ಜಿಲ್ಲೆಯಾದ್ಯಂತ ದಾಖಲೆ ಮಟ್ಟದಲ್ಲಿ ಪ್ರಕರಣಗಳು ಇತ್ಯರ್ಥವಾಗಿದ್ದವು. ಈ ಬಾರಿಯೂ ಅದಕ್ಕಿಂತ ಹೆಚ್ಚಿನ ಸಂಖ್ಯೆಯ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ. ಕಳೆದ ಅದಾಲತ್‌ನಲ್ಲಿ ವಿಶೇಷವಾಗಿ 3 ಪ್ರಮುಖ ವಿಭಜನಾ ಪ್ರಕರಣಗಳನ್ನು (Partition suits) ಕೇವಲ ರಾಜಿ ಸಂಧಾನದ ಮೂಲಕ ಯಶಸ್ವಿಯಾಗಿ ಇತ್ಯರ್ಥಪಡಿಸಿ, ದಶಕಗಳ ಕೌಟುಂಬಿಕ ಕಲಹಕ್ಕೆ ಮುಕ್ತಿ ಹಾಡಲಾಗಿತ್ತು. ಈ ಬಾರಿಯೂ ಅಂತಹ ಜಮೀನು ಮತ್ತು ಆಸ್ತಿ ಹಂಚಿಕೆ ವಿವಾದಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದರು.

ಪ್ರಾಧಿಕಾರದ ವತಿಯಿಂದ ಜಿಲ್ಲೆಯ ಕೆಲವು ಗ್ರಾಮಗಳನ್ನು ಗುರುತಿಸಿ, ಅಲ್ಲಿರುವ ಸಣ್ಣಪುಟ್ಟ ರಾಜಿಯಾಗಬಲ್ಲ ಪ್ರಕರಣಗಳನ್ನು ಸಂಪೂರ್ಣವಾಗಿ ಬಗೆಹರಿಸಿ "ವ್ಯಾಜ್ಯಮುಕ್ತ ಗ್ರಾಮಗಳನ್ನಾಗಿ" ಮಾಡಲು ವಿಶೇಷ ಯೋಜನೆ ರೂಪಿಸಲಾಗಿದೆ. ಈ ಬಾರಿ ಸುಮಾರು 100 ಗ್ರಾಮಗಳನ್ನು ವ್ಯಾಜ್ಯಮುಕ್ತಗೊಳಿಸುವ ಗುರಿ ಹೊಂದಲಾಗಿದೆ ಎಂದರು.

ಸಾರ್ವಜನಿಕರು "ನ್ಯಾಯಾಲಯಗಳಲ್ಲಿ ವರ್ಷಗಟ್ಟಲೆ ಅಲೆಯುವುದನ್ನು ತಪ್ಪಿಸಿ, ಹಣ ಮತ್ತು ಸಮಯವನ್ನು ಉಳಿಸಿಕೊಳ್ಳಲು ಲೋಕ ಅದಾಲತ್ ಅತ್ಯಂತ ಸುಲಭ ಮಾರ್ಗವಾಗಿದೆ. ಇಲ್ಲಿ ಗೆದ್ದವರು ಅಥವಾ ಸೋತವರು ಇರುವುದಿಲ್ಲ ಇಬ್ಬರೂ ಗೆದ್ದಂತೆಯೇ ಸರಿ. ವಕೀಲರ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸದಸ್ಯರ ಸಂಪೂರ್ಣ ಸಹಕಾರದೊಂದಿಗೆ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲಾಗುತ್ತಿದೆ. ಸಾರ್ವಜನಿಕರು ದ್ವೇಷ-ಅಸೂಯೆಗಳನ್ನು ಮರೆತು, ಅಣ್ಣ-ತಮ್ಮಂದಿರಂತೆ ಸೌಹಾರ್ದತೆಯಿಂದ ಬಾಳಲು ಈ ಅದಾಲತ್‌ನ ಪ್ರಯೋಜನವನ್ನು ಪಡೆದುಕೊಳ್ಳಬೇಕು" ಎಂದು ಹೇಳಿದರು.

ಸಾರ್ವಜನಿಕರು ತಮ್ಮ ಪ್ರಕರಣಗಳನ್ನು ಲೋಕ ಅದಾಲತ್‌ಗೆ ಸೇರಿಸಲು ಸಂಬಂಧಪಟ್ಟ ನ್ಯಾಯಾಲಯಗಳಿಗೆ ಅಥವಾ ಜಿಲ್ಲಾ/ತಾಲೂಕು ಕಾನೂನು ಸೇವೆಗಳ ಪ್ರಾಧಿಕಾರವನ್ನು ತಕ್ಷಣವೇ ಸಂಪರ್ಕಿಸಿ ಹೆಸರು ನೋಂದಾಯಿಸಿಕೊಳ್ಳಬಹುದು ಎಂದರು.

ಪಕ್ಷಗಾರರು ನ್ಯಾಯಾಲಯಗಳಲ್ಲಿರುವ ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಿ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧಿಶೆ ಶ್ರೀಮತಿ ನಾಗವೇಣಿ ಕರೆ ನೀಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿ.ಎಸ್.ಶಿವನಗೌಡ್ರ ಮಾತನಾಡಿ ಪ್ರಸ್ತುತ ಜಿಲ್ಲೆಯ ನ್ಯಾಯಾಲಯಗಳಲ್ಲಿ ಒಟ್ಟು 21,101 ಪ್ರಕರಣಗಳು ಬಾಕಿ ಇವೆ.

**ರಾಜಿಗೆ ಅರ್ಹ ಪ್ರಕರಣಗಳ ಆಯ್ಕೆ:** ಇವುಗಳ ಪೈಕಿ ರಾಜಿ ಸಂಧಾನದ ಮೂಲಕ ಸೌಹಾರ್ದಯುತ ಇತ್ಯರ್ಥಕ್ಕೆ ಸೂಕ್ತವಾಗಿರುವ 2,835 ಪ್ರಕರಣಗಳನ್ನು ಈಗಾಗಲೇ ಪ್ರಾಧಿಕಾರವು ಗುರುತಿಸಿ, ಆಯ್ಕೆ ಮಾಡಿಕೊಂಡಿದೆ. ಉಳಿದ ಪ್ರಕರಣಗಳನ್ನು ರಾಜಿ ಸಂಧಾನಕ್ಕೆ ಒಳಪಡಿಸುವ ಪ್ರಕ್ರಿಯೆ ಮುಂದುವರಿದಿದೆ ಎಂದರು.

# ನವಲಗುಂದದ ಯುವಕನ "ಫಸ್ಟ್ ಸೈಟ್ " ಆಲ್ಬಮ್ ಸಾಂಗ್ ಭರ್ಜರಿ ಸದ್ದು



ಬೆಂಗಳೂರು: ಮೂಲತಃ ನವಲಗುಂದದ ಗ್ರಾಮೀಣ ಭಾಗದ ಯುವಕ ರಘುವೀರ ಹೆಬ್ಬಾರ್ ಬೆಂಗಳೂರಿನಲ್ಲಿ ಸಾಫ್ಟ್‌ವೇರ್ ಇಂಜಿನಿಯರ್ ಆಗಿ ಕಾರ್ಯನಿರ್ವಹಿಸುತ್ತಿದ್ದು ಇದೀಗ "ಫಸ್ಟ್ ಸೈಟ್" ಎಂಬ ಆಲ್ಬಮ್ ಸಾಂಗ್ ಮೂಲಕ ಎಲ್ಲಡೆ ಮನೆಮಾತಾಗಿದ್ದಾರೆ.

ತಮ್ಮ ಬಿಡುವಿನ ದಿನಗಳಲ್ಲಿ ಹಾಡುಗಳ ರಚನೆ ಹಾಗೂ ತಮ್ಮ ಹಾಡಿಗೆ ತಾವೇ ಮ್ಯೂಸಿಕ್ ಕಂಪೋಸ್ ಮಾಡುವ ಆಸಕ್ತಿಯುಳ್ಳ ಇವರು ತಮ್ಮದೇ ಒಂದು ಆಲ್ಬಮ್ ಸಾಂಗ್ ಮಾಡಬೇಕೆಂದು ಕನಸು ಕಂಡರು. ಇವರ ಕನಸಿಗೆ ಜೊತೆಗಿರುವ ಸ್ನೇಹಿತರು ಕೈಜೋಡಿಸಿದರು. ಯೋಗೇಶ್ ರಾವ್ ನಿರ್ದೇಶನಕ್ಕೆ ಇಳಿದರು. ರಾಹುಲ್ ಠಾಕೂರ್ ತಮ್ಮ ಕ್ಯಾಮೆರಾ ಕೈಚಳಕ ತೋರಿದರು. ತಾಂತ್ರಿಕ ವರ್ಗದಲ್ಲಿ ಅಮಿತ್,ಶಂಕರ್, ದೀಪಕ್ ಒಳಗೊಂಡ ತಂಡ ಕಟ್ಟಿಕೊಂಡು ನಿರ್ಮಿಸಿದ್ದೇ "ಫಸ್ಟ್ ಸೈಟ್ " ಎಂಬ ಆಲ್ಬಮ್ ಸಾಂಗ್. ಈ ಹಾಡಿನಲ್ಲಿ ಇದೀಗ ಚಿತ್ರರಂಗಕ್ಕೆ ಕಾಲಿಟ್ಟ ವಿದ್ಯಾಶ್ರೀ ಹಾಗೂ ಕಾರ್ತಿಕ ಗೌಡ ಉತ್ತಮವಾಗಿ ಅಭಿನಯಿಸಿದರು. ಇದಕ್ಕೆಲ್ಲ ಬೆನ್ನೆಲುಬಾಗಿ ನಿಂತವರು ಚಿತ್ರರಂಗದ ಚಲನಚಿತ್ರ ಪತ್ರಕರ್ತರು, ಪಿ.ಆರ್.ಓ ಡಾ.ಪ್ರಭು ಗಂಜಿಹಾಳ, ಡಾ.ವೀರೇಶ್ ಹಂಡಿಗಿ ಅವರು. ಈಗಾಗಲೇ ಬಿಡುಗಡೆಗೊಂಡ ಈ ಹಾಡು 'ರಾಗ ರಶ್' ಎಂಬ ಯುಟ್ಯೂಬ್‌ನಲ್ಲಿ ಭರ್ಜರಿ ಸದ್ದು ಮಾಡಿ ಎಲ್ಲರ ಗಮನ ಸೆಳೆದಿದೆ. ಹೊಸಬರ ಮೊದಲ ಪ್ರಯತ್ನಕ್ಕೆ ಇಷ್ಟು ಪ್ರೋತ್ಸಾಹ ಸಿಕ್ಕಿದ್ದಕ್ಕೆ ತಂಡ ಬಹಳಷ್ಟು ಖುಷಿ ಆಗಿದ್ದು ಮತ್ತೊಂದು ಹೊಸ ಪ್ರಯತ್ನಕ್ಕೆ ಕೈಜೋಡಿಸಲು ಕಾರಣವಾಗಿದೆ. ಈ ಹಾಡುಗಳಿಗೆ ಹಿರಿಯ ಚಿತ್ರ ಸಾಹಿತಿ, ನಿರ್ದೇಶಕರು, ಸಿನಿ ಪತ್ರಕರ್ತರಾದ ಹಿರಿಯೂರು ರಾಘವೇಂದ್ರ, ಚಿತ್ರ ನಿರ್ದೇಶಕ ಬಿ.ಎ. ಪುರುಷೋತ್ತಮ ಓಂಕಾರ ಸ್ವಾಮಿ, ಹಿಟ್ ಧಾರಾವಾಹಿಗಳ ನಿರ್ದೇಶಕ ಪೃಥ್ವಿರಾಜ್ ಕುಲಕರ್ಣಿ ಹಾಗೂ ಚಲನಚಿತ್ರ ಮತ್ತು ಕಿರುತೆರೆ ಕಲಾವಿದೆ ಸುನಂದಾ ಕಲ್ಬುರ್ಗಿ ಅಲ್ಲದೆ ಹಲವರು ಹಾಡು ಮೆಚ್ಚಿ ವಿಡಿಯೋಗಳ ಮೂಲಕ ತಂಡಕ್ಕೆ ಶುಭ ಹಾರೈಸಿದ್ದಾರೆ.

ಈ ಹಾಡಿನ ಚಿತ್ರೀಕರಣ ಬೆಂಗಳೂರಿನ ನಂದಿ ಸಿಟಾ ಡಲ್ ಹಾಗೂ ಸುತ್ತಮುತ್ತ ನಡೆದಿದೆ. ನಿತ್ಯದ ಕೆಲಸದಲ್ಲಿ ಒಂದಷ್ಟು ಬಿಡುವಿದ್ದಾಗ ಹಾಡು ಕೇಳುವ ಹವ್ಯಾಸ ಇತ್ತು. ಹಾಗೆಯೇ ಬರೆಯಲು ಶುರು ಮಾಡಿ ಮ್ಯೂಸಿಕ್ ಮಾಡುವುದನ್ನು ಕಲಿತೆ. ಆದರೆ ನನ್ನ ಹಾಡಿನಲ್ಲಿ ಎಂತಹ ಶಕ್ತಿ ಇದೆ ಎಂದು ಆತ್ಮೀಯರು ಹಾಗೂ ಕುಟುಂಬದವರು ಕೇಳಿ ಮೆಚ್ಚುಗೆ ವ್ಯಕ್ತಪಡಿಸಿದಾಗಲೆ ಗೊತ್ತಾಯಿತು. ಹೀಗಾಗಿ ಹಾಡಿನ ಆಲ್ಬಮ್‌ಗಳನ್ನು ಇನ್ನಷ್ಟು ಮಾಡಬೇಕು ಎಂಬ ಉತ್ಸಾಹ ನನಗೂ, ನಮ್ಮ ತಂಡಕ್ಕೂ ಬಂದಿದೆ ಎಂದು ರಘುವೀರ್ ಹೇಳುತ್ತಾರೆ. ಒಟ್ಟಿನಲ್ಲಿ ಸಾಫ್ಟವೇರ ಉದ್ಯೋಗಿ ಮುಂದಿನ ದಿನಗಳಲ್ಲಿ ಹೊಸಪ್ರಯೋಗಗಳ ಮೂಲಕ ಸಂಗೀತಕ್ಷೇತ್ರದಲ್ಲಿ ಗುರುತಿಸುವಂತಾಗಲಿ ಎಂದು ಶುಭ ಹಾರೈಸೋಣ.

# ರಸ್ತೆ ಪೂರ್ಣಗೊಳಿಸದಿದ್ದರೆ ಲೋಕೋಪಯೋಗಿ ಇಲಾಖೆ ಎದುರು ಪ್ರತಿಭಟನೆ



ಮುದ್ದೇಬಿಹಾಳ: ಹಿರೇಮುರಾಳ ಗ್ರಾಮದಿಂದ ಹುನುಕುಂಟಿ ಕ್ರಾಸ್‌ವರೆಗೆ ನಡೆಯುತ್ತಿರುವ ರಸ್ತೆ ಕಾಮಗಾರಿ ಆರಂಭವಾಗಿ ಸುಮಾರು ಎಂಟು ತಿಂಗಳು ಕಳೆದರೂ ಇನ್ನೂ ಪೂರ್ಣ ಗೊಂಡಿಲ್ಲ. ಇದರಿಂದ ಈ ಮಾರ್ಗದಲ್ಲಿ ಸಂಚರಿಸುವ ಸಾರ್ವಜನಿಕರು ಹಾಗೂ ವಾಹನ ಸವಾರರು ತೀವ್ರ ತೊಂದರೆ ಅನುಭವಿಸು ತ್ತಿದ್ದಾರೆ ಎಂದು ಸಾಮಾಜಿಕ ಹೋರಾಟಗಾರ ಶೇಖರ ಮಾದರ (ಆಲೂರು) ಆರೋಪಿಸಿದ್ದಾರೆ.

ಈ ರಸ್ತೆಯ ಮೂಲಕ ಮುರಾಳ ಸೇರಿದಂತೆ ಸುತ್ತಮುತ್ತಲಿನ ನಾಲ್ಕು ಗ್ರಾಮಗಳ ಜನರು ನಿತ್ಯ ಸಂಚಾರ ಮಾಡುತ್ತಾರೆ. ಬಸ್, ಮೋಟಾರ್ ಸೈಕಲ್, ಸೈಕಲ್, ಟ್ರ್ಯಾಕ್ಟರ್ ಸೇರಿದಂತೆ ವಿವಿಧ ವಾಹನಗಳ ಸಂಚಾರಕ್ಕೆ ರಸ್ತೆ ದುಸ್ಥಿತಿ ಅಡ್ಡಿಯಾಗಿದ್ದು, ಧೂಳು & ಗುಂಡಿಗಳಿಂದ ಸಾರ್ವಜನಿಕರಿಗೆ ಸಂಕಷ್ಟ ಎದುರಾಗಿದೆ ಎಂದು ಅವರು ತಿಳಿಸಿದ್ದಾರೆ.

ಸಂಬಂಧಿಸಿದ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಕೂಡಲೇ ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಿ ಸಾರ್ವಜನಿಕರ ಸಮಸ್ಯೆಗೆ ಪರಿಹಾರ ಕಲ್ಪಿಸಬೇಕು. ಇಲ್ಲದಿದ್ದರೆ ನಾಲ್ಕು ಗ್ರಾಮಗಳ ಜನರನ್ನು ಸಂಘಟಿಸಿ ಮುದ್ದೇಬಿಹಾಳ ಲೋಕೋಪಯೋಗಿ ಇಲಾಖೆ ಕಚೇರಿ ಎದುರು ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಶೇಖರ ಮಾದರ ಎಚ್ಚರಿಕೆ ನೀಡಿದ್ದಾರೆ.

ಅಭಿವೃದ್ಧಿ ಕಾಮಗಾರಿಗಳು ವಿಳಂಬವಾಗುವು ದರಿಂದ ಗ್ರಾಮೀಣ ಭಾಗದ ಜನರಿಗೆ ಅನಗತ್ಯ ತೊಂದರೆ ಉಂಟಾಗುತ್ತಿದ್ದು, ಅಧಿಕಾರಿಗಳು ಕೂಡಲೇ ಸ್ಥಳ ಪರಿಶೀಲನೆ ನಡೆಸಿ ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.

# ಕಾನೂನು ಪದವೀಧರರಿಗೆ ನ್ಯಾಯಾಂಗ ಆಡಳಿತ ವೃತ್ತಿ ತರಬೇತಿ ಭತ್ಯೆ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಧಾರವಾಡ: ಪ್ರಸಕ್ತ ಸಾಲಿನ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಧಾರವಾಡ ಜಿಲ್ಲೆಗೆ ಸೇರಿದ ಹಿಂದುಳಿದ ವರ್ಗಗಳ ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-3ಎ, ಮತ್ತು ಪ್ರವರ್ಗ-3ಬಿ ವರ್ಗಕ್ಕೆ ಸೇರಿದ ಕಾನೂನು ಪದವೀಧರರಿಗೆ ನ್ಯಾಯಾಂಗ ಆಡಳಿತ ವೃತ್ತಿ ತರಬೇತಿ ಅವಧಿಯಲ್ಲಿ ತರಬೇತಿ ಭತ್ಯೆ ಪಾವತಿಸುವ ಕಾರ್ಯಕ್ರಮದಡಿ ಅರ್ಹ ಕಾನೂನು ಪದವೀಧರರಿಂದ ಹಾಗೂ ಎರಡನೇ ತಂಡದ ಅಭ್ಯರ್ಥಿಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ

ಪ್ರರ್ಗ-1 ರ ಅಭ್ಯರ್ಥಿಯ ಕುಟುಂಬದ ವಾರ್ಷಿಕ ರೂ,3.50 ಲಕ್ಷ ಆದಾಯ ಮಿತಿ ಹೊಂದಿದ್ದು 40 ವರ್ಷದೊಳಗಿನವರಾಗಿರಬೇಕು. ಪ್ರವರ್ಗ-2ಎ, ಪ್ರವರ್ಗ-3ಎ, ಮತ್ತು ಪ್ರವರ್ಗ-3ಬಿ ವರ್ಗಕ್ಕೆ ಸೇರಿದ ಅಭ್ಯರ್ಥಿಗಳ ಆದಾಯ 2.50 ಲಕ್ಷ ಆದಾಯ ಮಿತಿ ಹೊಂದಿದ್ದು 38 ವರ್ಷದೂಳಗಿನವರಾಗಿರಬೇಕು.

ಕಾನೂನು ಪದವೀಧರರಿಗೆ ವಕೀಲ ವೃತ್ತಿಯಲ್ಲಿ ನ್ಯಾಯಾಂಗ ಸೇವೆಯ ಪೂರ್ವ ತರಬೇತಿ ಪಡೆಯಲು ಪದವಿ ಪಡೆದ 2 ವರ್ಷದೊಳಗಿನ ಅವಧಿಯ ಅರ್ಹ ಆಸಕ್ತಿಯುಳ್ಳ (ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-3ಎ, ಮತ್ತು ಪ್ರವರ್ಗ-3ಬಿ ವರ್ಗಕ್ಕೆ ಸೇರಿದ) ಕಾನೂನು ಪದವೀಧರರು ಜುಲೈ 18, 2026 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾಸಿಕ ರೂ. 4,000 ಭತ್ಯೆಯನ್ನು 4 ವರ್ಷಗಳವರೆಗೆ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿಸಂಖ್ಯೆ:0836-2447961 ಗೆ ಅಥವಾ www.bcwd.kar.nic.in ವೆಬ್‌ಸೈಟ್ ಮೂಲಕ ಮಾಹಿತಿ ಪಡೆದುಕೊಳ್ಳಬಹುದೆಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಡಪದ, ಕಾಯಕ ಸಮುದಾಯಗಳಿಗೆ ವಿಧಾನಸಭೆ-ವಿಧಾನ ಪರಿಷತ್‌ನಲ್ಲಿ ಸ್ಥಾನ ನೀಡಬೇಕು:ಮಾಜಿ ಶಾಸಕ ನಡಹಳ್ಳಿ



ಮುದ್ದೇಬಿಹಾಳ: ರಾಜ್ಯದಲ್ಲಿ ಹಡಪದ ಸೇರಿದಂತೆ ಕಾಯಕ ಸಮುದಾಯಗಳಿಗೆ ರಾಜಕೀಯವಾಗಿ ಸಮರ್ಪಕ ಪ್ರಾತಿನಿಧ್ಯ ದೊರೆಯುತ್ತಿಲ್ಲ. ಹಡಪದ ಸಮಾಜದ ಜನರು ಸಂಘಟಿತರಾಗಿ ಹೋರಾಟ ನಡೆಸಿದರೆ ಮಾತ್ರ ರಾಜಕೀಯ ಕ್ಷೇತ್ರದಲ್ಲಿ ಸ್ಥಾನಮಾನ ಪಡೆಯಲು ಸಾಧ್ಯ ಎಂದು ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಹಾಗೂ ಮಾಜಿ ಶಾಸಕ ಎ.ಎಸ್. ಪಾಟೀಲ ನಡಹಳ್ಳಿ ಹೇಳಿದರು.

ತಾಲ್ಲೂಕಿನ ತಂಗಡಗಿ ಗ್ರಾಮದಲ್ಲಿ ಹಡಪದ ಅಪ್ಪಣ್ಣ ದೇವರ ಮಹಾಸಂಸ್ಥಾನ ಮಠ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ ಶ್ರೀ ಲಿಂಗೈಕ್ಯ ಬಸವಪ್ರಿಯ ಅಪ್ಪಣ್ಣ ಮಹಾಸ್ವಾಮಿಗಳ 18ನೇ ಪುಣ್ಯಸ್ಮರಣೋತ್ಸವ, ಶ್ರೀ ಮ.ನಿ.ಪ್ರ. ಜಗದ್ಗುರು ಅನ್ನದಾನಿ ಭಾರತಿ ಅಪ್ಪಣ್ಣ ಮಹಾಸ್ವಾಮಿಗಳ 18ನೇ ವರ್ಷದ ಪಟ್ಟಾಧಿಕಾರ ಮಹೋತ್ಸವ, ಪ್ರತಿಭಾ ಪುರಸ್ಕಾರ ಹಾಗೂ ಸಾಧಕರ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಬಸವಣ್ಣನವರ ಅನುಭವ ಮಂಟಪದಲ್ಲಿ ಹಡಪದ ಅಪ್ಪಣ್ಣ ಅವರಿಗೆ ವಿಶೇಷ ಸ್ಥಾನಮಾನವಿತ್ತು. ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಿದ್ದ ಹಡಪದ ಅಪ್ಪಣ್ಣ ಶಿವಶರಣರ ಇತಿಹಾಸದಲ್ಲಿ ಅಜರಾಮರರಾಗಿದ್ದಾರೆ. ಆದರೆ ಇಂತಹ ಮಹಾನ್ ಪರಂಪರೆಯನ್ನು ಹೊಂದಿರುವ ಹಡಪದ ಸಮಾಜಕ್ಕೆ ರಾಜಕೀಯವಾಗಿ ನ್ಯಾಯ ಸಿಕ್ಕಿಲ್ಲ ಎಂದು ವಿಷಾದಿಸಿದರು.

ರಾಜ್ಯದಲ್ಲಿ ಮುಖ್ಯಮಂತ್ರಿ, ಸಚಿವರು, ಶಾಸಕರು, ಸಂಸದರು ಹಾಗೂ ವಿಧಾನ ಪರಿಷತ್ ಸದಸ್ಯರಾಗಿ ಅನೇಕ ಸಮಾಜಗಳ ಪ್ರತಿನಿಧಿಗಳು ಇದ್ದರೂ ಹಡಪದ ಸಮಾಜಕ್ಕೆ ಅವಕಾಶ ದೊರೆತಿಲ್ಲ. ಹಡಪದ, ಕುಂಬಾರ, ಉಪ್ಪಾರ, ಹುಗಾರ, ಮಡಿವಾಳ, ಬಡಿಗೇರ ಸೇರಿದಂತೆ ಕಾಯಕ ಸಮುದಾಯಗಳು ಒಗ್ಗಟ್ಟಿನಿಂದ ಹೋರಾಟ ನಡೆಸಿದರೆ ಮಾತ್ರ ರಾಜಕೀಯವಾಗಿ ಮುಂದೆ ಬರಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಕುಂಚಗಿರಿ ಹೊಸದುರ್ಗದ ಶ್ರೀ ಮ.ನಿ.ಪ್ರ. ಜಗದ್ಗುರು ಶಾಂತವೀರ ಮಹಾಸ್ವಾಮಿಗಳು ಮಾತನಾಡಿ, ಸಣ್ಣ ಸಮುದಾಯಗಳು ತಮ್ಮ ಹಕ್ಕುಗಳಿಗಾಗಿ ಸಂಘಟಿತರಾಗಬೇಕು. ಸಮಾಜದ ಅಭಿವೃದ್ಧಿಗೆ ಶಿಕ್ಷಣ ಮತ್ತು ಸಂಘಟನೆ ಮುಖ್ಯವಾಗಿದೆ. ಮಠಗಳ ಅಭಿವೃದ್ಧಿಗೆ ಸಮಾಜದ ಸಹಕಾರ ಅಗತ್ಯವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಹಡಪದ ಸಮಾಜದ ರಾಜ್ಯಾಧ್ಯಕ್ಷ ದೇವು ಹಡಪದ ಮಾತನಾಡಿ, ಹಡಪದ ಸಮಾಜವನ್ನು 2ಎ ಮೀಸಲಾತಿಗೆ ಸೇರಿಸುವಂತೆ ಸರ್ಕಾರಕ್ಕೆ ಆಗ್ರಹಿಸಿದರು. ಸಮಾಜದ ಯುವಕರು ಐಎಎಸ್, ಕೆಎಎಸ್ ಸೇರಿದಂತೆ ಉನ್ನತ ಹುದ್ದೆಗಳನ್ನು ಅಲಂಕರಿಸುವಂತೆ ಪ್ರೋತ್ಸಾಹಿಸಬೇಕು ಎಂದರು.

ಗಂಗಾವತಿ ಸಮಾಜದ ಯುವ ಮುಖಂಡ ಸಂಗಮೇಶ ಸುಗ್ರೀವಾ ಮಾತನಾಡಿ, ಸಮಾಜದೊಳಗಿನ ಭಿನ್ನಾಭಿಪ್ರಾಯಗಳನ್ನು ಬದಿಗೊತ್ತಿ ಎಲ್ಲರೂ ಒಗ್ಗಟ್ಟಿನಿಂದ ಸಾಗಬೇಕು. ಹೋರಾಟ ಮಾಡಿದರೆ ಮಾತ್ರ ರಾಜಕೀಯ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿ ಅವಕಾಶಗಳು ದೊರೆಯುತ್ತವೆ ಎಂದು ಹೇಳಿದರು.

ಇದಕ್ಕೂ ಮುನ್ನ ಸಹಜ ಶಿವಯೋಗ, ಲಿಂಗದೀಕ್ಷೆ ಹಾಗೂ ಪ್ರಥಮ ಜಗದ್ಗುರು ಬಸವಪ್ರಿಯ ಅಪ್ಪಣ್ಣ ಮಹಾಸ್ವಾಮಿಗಳ ಕರ್ತೃಗದ್ದುಗೆ ಅಡಿಗಲ್ಲು ಸಮಾರಂಭ ನೆರವೇರಿತು.

ಕಾರ್ಯಕ್ರಮದಲ್ಲಿ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಅಲ್ಲದೆ ಶಿಕ್ಷಣ, ಸಾಹಿತ್ಯ, ಕೃಷಿ, ಸಮಾಜಸೇವೆ, ಧಾರ್ಮಿಕ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಹಡಪದ ಸಮಾಜದ ಸಾಧಕರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಬಾಗಲಕೋಟೆಯ ಬನಶಂಕರಿ ರಕ್ತನಿಧಿ ಸಹಯೋಗದಲ್ಲಿ ಆಯೋಜಿಸಿದ್ದ ರಕ್ತದಾನ ಶಿಬಿರದಲ್ಲಿ ಡಾ. ಅಭಿಷೇಕ ಪಾಟೀಲ, ಪೂರ್ಣಿಮಾ ನಿಲಗೂರ, ಪ್ರಸಾದ ನಂದಾಪೂರ, ವಿನೋದ ಹಾಗೂ ಅವರ ತಂಡದ ನೇತೃತ್ವದಲ್ಲಿ 30ಕ್ಕೂ ಹೆಚ್ಚು ಜನರು ರಕ್ತದಾನ ಮಾಡಿ ಮಾನವೀಯ ಸೇವೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಚಿತ್ರದುರ್ಗದ ಶಿವಮೂರ್ತಿ ಮುರುಘಾ ಶರಣರು, ಮಾದಾರ ಚನ್ನಯ್ಯ ಮಹಾಸ್ವಾಮಿಗಳು, ಬಸವ ಮಾಚಿದೇವ ಮಹಾಸ್ವಾಮಿಗಳು, ಪುರುಷೋತ್ತಮಾನಂದಪುರಿ ಮಹಾಸ್ವಾಮಿಗಳು, ವೇಮಾನಂದ ಮಹಾಸ್ವಾಮಿಗಳು, ಪ್ರಸನ್ನಾನಂದಪುರಿ ಮಹಾಸ್ವಾಮಿಗಳು, ಶಾಂತಭೀಷ್ಮ ಚೌಡಯ್ಯ ಮಹಾಸ್ವಾಮಿಗಳು, ಬಸವ ಕುಂಬಾರ ಗುಂಡಯ್ಯ ಮಹಾಸ್ವಾಮಿಗಳು, ಬಸವ ಪ್ರಸಾದ ಮಹಾಸ್ವಾಮಿಗಳು, ಬಸವರಾಜೇಂದ್ರ ಮಹಾಸ್ವಾಮಿಗಳು, ಗೋವಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಸಿದ್ದಣ್ಣ ಮೇಟಿ, ಎಸ್.ಎಸ್. ಪಾಟೀಲ, ತಾಲೂಕು ಹಡಪದ ಸಮಾಜದ ಅಧ್ಯಕ್ಷ ಶಿವಪ್ಪ ಹಡಪದ, ಮುತ್ತಣ್ಣ ಹಡಪದ, ನಾಗೇಶ ನಾಗೂರ, ಫಕೀರಪ್ಪ ಹಡಪದ, ಕುಮಾರ ನಾವಿ ಸೇರಿದಂತೆ ರಾಜ್ಯ, ಜಿಲ್ಲಾ ಹಾಗೂ ತಾಲೂಕು ಮಟ್ಟದ ಪದಾಧಿಕಾರಿಗಳು, ಸಮಾಜದ ಮುಖಂಡರು ಮತ್ತು ಭಕ್ತಾದಿಗಳು ಉಪಸ್ಥಿತರಿದ್ದರು.



BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001